ಜನಮನದ ದನಿ
# ಪ್ರಜೋದಯ
ಸಂಪಾದಕ : ಜೆ.ಆರ್. ಕೆಂಚೇಗೌಡ
07 ಸೆಪ್ಟೆಂಬರ್, 2026 ಸೋಮವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ -176 ಪುಟ-4 ಹಾಸನ E-mail : prajodayahsn@gmail.com
RNI NO: KARKAN/2007/22629


ದಕ್ಷಿಣ ವಲಯ ತಂಡದ ವಿರುದ್ಧ ದುಲೀಪ್ ಟ್ರೋಫಿ ಫೈನಲ್ ಪಂದ್ಯದಲ್ಲಿ ನಾಯಕ ಇಶಾನ್ ಕಿಶನ್ ಅವರ ಸ್ಫೋಟಕ ಶತಕದ ನೆರವಿನಿಂದ ಪೂರ್ವ ವಲಯ ತಂಡವು ಮೊದಲ ದಿನದ ಅಂತ್ಯಕ್ಕೆ 79 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 385 ರನ್ ಗಳಿಸಿದೆ.


ಮೆದುಳು ಕಾಲವನ್ನು ಹೇಗೆ ನಿರ್ಮಿಸುತ್ತದೆ ಗಡಿಯಾರವಿಲ್ಲದ ವ್ಯವಸ್ಥೆ » 2

ಇರಾನ್ ತೈಲ ಟ್ಯಾಂಕರ್ ನಾಶಗೊಳಿಸಿದ ಅಮೇರಿಕಾ » 3

ಸಕಲೇಶಪುರ-ಆಲೂರು ಬರ ಪೀಡಿತ ಪಟ್ಟಿಗೆ ಸೇರಿಸಿ » 4

# ಅಹಿಂದಕ್ಕೆ ಶೇ.75 ಮೀಸಲಾತಿ ಸಿಗಬೇಕು

## ಸಮಾನತೆಯ ಅವಕಾಶ ಹೆಚ್ಚಲಿ | ಮಾಜಿ ಸಿ.ಎಂ.ಸಿದ್ದರಾಮಯ್ಯ ಪ್ರತಿಪಾದನೆ

• ಪ್ರಜೋದಯ ವರದಿ

**ಬೆಂಗಳೂರು:** ಜನಸಂಖ್ಯೆಗೆ ಅನುಗುಣವಾಗಿ ಸಮಾನ ಅವಕಾಶ ಕಲ್ಪಿಸದೆ ಸಮಾನತೆಯ ಸಮಾಜ ನಿರ್ಮಾಣ ಅಸಾಧ್ಯವೆಂದು ಪ್ರತಿಪಾದಿಸಿರುವ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಲಿತರು, ಹಿಂದುಳಿದ ವರ್ಗ ಹಾಗು ಅಲ್ಪಸಂಖ್ಯಾತರಿಗೆ ಮೀಸಲಾತಿಯನ್ನು ಶೇ.75ಕ್ಕೆ ಹೆಚ್ಚಿಸಬೇಕೆಂದು ಆಗ್ರಹಿಸಿದ್ದಾರೆ.

ಭಾನುವಾರ ನಡೆದ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ಬೆಳ್ಳಿ ಹಬ್ಬದ ಸಮಾರಂಭದಲ್ಲಿ ಮಾತನಾಡಿ, ಜಾತಿ ಗಣತಿಯನ್ನು ಜಾರಿಗೊಳಿಸುವುದರ ಜೊತೆಗೆ ಮೀಸಲಾತಿ ಹೆಚ್ಚಳವನ್ನು ಪರಿಗಣಿಸಬೇಕು. ಈ ಸಮುದಾಯಗಳಿಗೆ ಸಾಮಾಜಿಕ ನ್ಯಾಯ ದೊರೆಯಬೇಕಾದರೆ ಕನಿಷ್ಟ ಶೇ.75ರಷ್ಟು ಮೀಸಲಾತಿ ಇರಬೇಕು. ಪ್ರತಿ ಸಮುದಾಯಕ್ಕೂ ಅದರ ಜಾತಿ ಹಾಗು ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ದೊರೆಯಬೇಕು. ಅದೇ ರೀತಿಯಲ್ಲಿ ಲೋಕಸಭೆ ಹಾಗು ವಿಧಾನಸಭೆ



ಗಳಲ್ಲೂ ಜಾತಿ ಮತ್ತು ಜನಸಂಖ್ಯೆಯ ಆಧಾರದ ಮೇಲೆ ಮೀಸಲಾತಿ ಕಲ್ಪಿಸುವುದು ರಾಜಕೀಯ ಸಮಾನತೆ ಸಾಧಿಸಲು ಸಾಧ್ಯವಾಗುತ್ತದೆಂದರು.

ತಾವು ಹಿಂದಿನ ಬಾರಿ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ನಡೆಸಲಾಗಿದ್ದ ಜಾತಿ ಸಮೀಕ್ಷೆಯ ವರದಿಯನ್ನು ಜಾರಿಗೊಳಿಸಬೇಕು. ಮಧುಸೂದನ್ ನಾಯಕ್ ನೇತೃತ್ವದ ಹಿಂದುಳಿದ ವರ್ಗಗಳ ಆಯೋಗ ಸಲ್ಲಿಸಿದ್ದ ವರದಿಯನ್ನು ಉಲ್ಲೇಖಿಸಿದ ಅವರು, ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಯುವ ಮುನ್ನ ತಾವು ವರದಿಯನ್ನು ಅಂಗೀಕರಿಸಿದ್ದಾಗಿ ತಿಳಿಸಿದರು.

> **ಹಿಂದುಳಿದ ಜಾತಿಗಳ ಒಕ್ಕೂಟದ ಬೆಳ್ಳಿ ಹಬ್ಬದ ಸಮಾರಂಭಕ್ಕೆ ನಮ್ಮ ತಂದೆ ಸಿದ್ದರಾಮಯ್ಯ ಅವರನ್ನು ಆಹ್ವಾನಿಸಲಾಗಿದೆ. ಜೊತೆಗೆ ಹಿಂದುಳಿದ ವರ್ಗಗಳ ನಾಯಕರನ್ನು ಕರೆದಿದ್ದಾರೆ. ಅದು ಅಹಿಂದ ಸಮಾವೇಶವಲ್ಲ. ಬಿಜೆಪಿ ಪಾದ ಯಾತ್ರೆಗೆ ಟಕ್ಕರ್ ಕೊಡಲು ಕಾರ್ಯಕ್ರಮ ಮಾಡಿಲ್ಲ.**
> **-ಯತೀಂದ್ರ ಸಿದ್ದರಾಮಯ್ಯ, ಸಚಿವ**

ಆದರೆ, ನ್ಯಾಯಾಲಯದ ಆದೇಶದ ಹಿನ್ನಲೆಯಲ್ಲಿ ವರದಿಯನ್ನು ಜಾರಿಗೊಳಿಸಲು ಅಥವಾ ಸಾರ್ವಜನಿಕಗೊಳಿಸಲು ಸಾಧ್ಯವಾಗುತ್ತಿಲ್ಲ. ಈ ವಿಚಾರವನ್ನು ಒಕ್ಕೂಟದ ಅಧ್ಯಕ್ಷ ರಾಮಚಂದ್ರಪ್ಪ ಅವರ ಗಮನಕ್ಕೂ ತಂದಿರುವುದಾಗಿ ತಿಳಿಸಿದರು.

**ನನ್ನ ಅವಧಿಯಲ್ಲಿ ವರದಿ ಅಪೂರ್ಣ**

ಹಿಂದುಳಿದ ಸಮುದಾಯಗಳ ಜನಸಂಖ್ಯೆಗೆ ಸಂಬಂಧಿಸಿ ನಿಖರವಾದ ಅಂಕಿ-ಅಂಶಗಳು ಲಭ್ಯವಿಲ್ಲದ ಕಾರಣ ಜಾತಿ ಸಮೀಕ್ಷೆ ಅಗತ್ಯವಾಗಿದೆ. 2013ರಲ್ಲಿ ಮುಖ್ಯಮಂತ್ರಿಯಾದಾಗ ಸಮೀಕ್ಷೆ ನಡೆಸಲು ಆದೇಶಿಸಿದ್ದೆ. ಆದರೆ ತಮ್ಮ ಅಧಿಕಾರಾವಧಿಯಲ್ಲಿ ವರದಿ ಪೂರ್ಣಗೊಂಡಿರಲಿಲ್ಲ. ನಂತರ ಬಂದ ಸರ್ಕಾರ ವರದಿಯನ್ನು ಅಂಗೀಕರಿಸಲಿಲ್ಲ. ಎಲ್ಲರಿಗೂ ಸಮಾನ ಪಾಲು ಎಂಬುದನ್ನು ನಾವು ಪ್ರತಿಪಾದಿಸುತ್ತಾ ಬಂದಿದ್ದೇವೆ. ಸಮಾನತೆ ಹಾಗು ಸಮಾನ ಅವಕಾಶಗಳು ದೊರೆಯುವ ವರೆಗೆ ಜಾತಿ ವ್ಯವಸ್ಥೆಯ ವಿರುದ್ಧದ ಹೋರಾಟ ಮುಂದುವರಿಯಬೇಕೆಂದು ಕರೆ ನೀಡಿದರು.

ಜಾತಿ ವ್ಯವಸ್ಥೆಯಿಂದಾಗಿ ಇತಿಹಾಸದುದ್ದಕ್ಕೂ ಸಮಾಜದ ದೊಡ್ಡ ವರ್ಗ ಶಿಕ್ಷಣ ಹಾಗು ಅವಕಾಶಗಳಿಂದ ವಂಚಿತವಾಗಿತ್ತು. ಮೀಸಲಾತಿಯ ಕೊರತೆಯನ್ನು ವೈಯಕ್ತಿಕವಾಗಿ ಅನುಭವಿಸಿದ್ದೇನೆ. ಶಿಕ್ಷಣ ಹಾಗು ಉದ್ಯೋಗದಲ್ಲಿ ಮೀಸಲಾತಿ ಕಲ್ಪಿಸಿರುವುದು ಹಿಂದುಳಿದ ಸಮುದಾಯಗಳಿಗೆ ಹೆಚ್ಚಿನ ಅವಕಾಶಗಳನ್ನು ಒದಗಿಸಲು ಸಹಕಾರಿಯಾಗಿದೆ ಎಂದರು.

ತಮ್ಮ ಅಧಿಕಾರಾವಧಿಯಲ್ಲಿ ಕೈಗೊಂಡ ಕ್ರಮಗಳನ್ನು ಪ್ರಸ್ತಾಪಿಸಿದ ಸಿದ್ದರಾಮಯ್ಯ, ಹಿಂದುಳಿದ ವರ್ಗಗಳ ಇಲಾಖೆಯ ಬಜೆಟ್ ಆರಂಭವಾದಾಗ ಇದ್ದ 5 ಕೋಟಿಯಿಂದ 2026-27ನೇ ಸಾಲಿನಲ್ಲಿ 4,461 ಕೋ.ರೂ.ಗೆ ಏರಿಕೆಯಾಗಿದೆ. ಪ್ರಸ್ತುತ ಹಿಂದುಳಿದ ಸಮುದಾಯಗಳ 2.58 ಲಕ್ಷ ವಿದ್ಯಾರ್ಥಿಗಳಿಗೆ ವಸತಿ ಕಲ್ಪಿಸುವ 2,712 ಹಾಸ್ಟೆಲ್‌ಗಳಿವೆ ಎಂದು ತಿಳಿಸಿದರು.

**ಮುಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ**

ಮುಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದು ಶಾಸಕ ಪ್ರದೀಪ್ ಈಶ್ವರ್ ಅವರು ಸಮಾ

» ನಾಲ್ಕನೇ ಪುಟದಲ್ಲಿ


ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರಿಗೆ ಅರಸೀಕೆರೆ ತಾಲ್ಲೂಕು ಬಾಣಾವರದಲ್ಲಿ ಭಾನುವಾರ ಏರ್ಪಡಿಸಿದ್ದ ಅಭಿನಂದನಾ ಸಮಾರಂಭಕ್ಕೆ ಅದ್ದೂರಿ ಸ್ವಾಗತ ಕೋರಲಾಯಿತು.

## ವಿದೇಶದಲ್ಲಿ 3145 ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅವಕಾಶ : ಸಿ.ಎಂ.

• ಪ್ರಜೋದಯ ವರದಿ

**ಬೆಂಗಳೂರು:** ನಮ್ಮಲ್ಲಿ ಇರುವಂತಹ ಪ್ರತಿಭಾವಂತ ಮಾನವ ಸಂಪನ್ಮೂಲ ದೇಶದ ಯಾವುದೇ ರಾಜ್ಯದಲ್ಲಿ ಇಲ್ಲ. ನಮ್ಮ ಮಕ್ಕಳು ಜಾಗತಿಕ ಮಟ್ಟದಲ್ಲಿ ಕಲಿಯಬೇಕು. ಅವರು ಉದ್ಯೋಗಿಗಳಾದರೆ ಸಾಲದು, ಉದ್ಯೋಗದಾತರಾಗಬೇಕೆಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಕೌಶಲ ಅಭಿವೃದ್ಧಿ ಇಲಾಖೆ ನಗರದ ಅರಮನೆ ಮೈದಾನದಲ್ಲಿ


ಭಾನುವಾರ ಆಯೋಜಿಸಿದ್ದ ವಿದೇಶದಲ್ಲಿ ಅಧ್ಯಯನ 2026 ಕಾರ್ಯ

ಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಜ್ಞಾನದ ಮೇಲಿನ ಹೂಡಿಕೆ ಅತ್ಯುತ್ತಮ ಆಸ್ತಿಯಾಗುತ್ತದೆ. ಮಾನವನಿಗೆ ಎಲ್ಲೆಗಳಿವೆ. ಆದರೆ, ಜ್ಞಾನಕ್ಕೆ ಎಲ್ಲೇ ಇಲ್ಲ. ಜಾಗತಿಕ ಮಟ್ಟದ ಶಿಕ್ಷಣದ ಅವಕಾಶ ಪಡೆಯುವುದರಿಂದ ಮಾನಸಿಕವಾಗಿ ಬಲಿಷ್ಠರಾಗಬಹುದೆಂದರು.

ಕ್ವೀನ್ಸ್ ಲ್ಯಾಂಡ್ ವಿಶ್ವವಿದ್ಯಾಲಯದೊಂದಿಗೆ ನಾವು ಒಡಂಬಡಿಕೆ ಮಾಡಿ

» ನಾಲ್ಕನೇ ಪುಟದಲ್ಲಿ

## ಕಾಡೆಮ್ಮೆ ದಾಳಿ: ರೈತನಿಗೆ ಗಂಭೀರ ಗಾಯ



• ಪ್ರಜೋದಯ ವರದಿ

**ಸಕಲೇಶಪುರ:** ಹೆತ್ತೂರು ಹೋಬಳಿಯ ಹೊಂಗಡಹಳ್ಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಿಳಿಗಲು ಗ್ರಾಮದಲ್ಲಿ ಶನಿವಾರ ಕಾಡೆಮ್ಮೆ ದಾಳಿಗೆ ರೈತರೊಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಹಿಳಿಗಲು ಗ್ರಾಮದ ಜಯಪ್ರಕಾಶ್ ಗಾಯಗೊಂಡಿದ್ದಾರೆ. ಜಮೀನಿನಿಂದ ಮನೆಗೆ ಹಿಂದಿರುಗುತ್ತಿದ್ದ ವೇಳೆ ಏಕಾಏಕಿ ಕಾಡೆಮ್ಮೆ ದಾಳಿ ನಡೆಸಿದೆ. ಕೈ-ಕಾಲುಗಳಿಗೆ ಗಂಭೀರ ಗಾಯಗಳಾಗಿದ್ದು, ಬಲ ಭುಜದ ಮೂಳೆ ಮುರಿದಿದೆ. ಗಾಯಗೊಂಡ ಜಯಪ್ರಕಾಶ್ ಅವರನ್ನು ಹೆತ್ತೂರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕರೆದೊಯ್ದು ಪ್ರಥಮ ಚಿಕಿತ್ಸೆ ನೀಡಲಾಯಿತು. ಹೆಚ್ಚಿನ ಚಿಕಿತ್ಸೆಗಾಗಿ ಹಿಮ್ಸ್‌ಗೆ ದಾಖಲಿಸಲಾಗಿದೆ. ಘಟನೆ ನಡೆದ ಸ್ಥಳಕ್ಕೆ ಅರಣ್ಯ ಇಲಾಖೆ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಆಸ್ಪತ್ರೆಗೆ ಭೇಟಿ ನೀಡಿ ಜಯಪ್ರಕಾಶ್ ಅವರ ಆರೋಗ್ಯ ವಿಚಾರಿಸಿದ ಶಾಸಕ ಸಿಮೆಂಟ್ ಮಂಜು ಅವರು ಮಾತನಾಡಿ, ಕಾಡೆಮ್ಮೆ ದಾಳಿಯಿಂದ ಗಾಯಗೊಂಡ ಜಯಪ್ರಕಾಶ್ ಅವರ ಚಿಕಿತ್ಸೆಗೆ ತಗಲುವ ಸಂಪೂರ್ಣ ವೆಚ್ಚವನ್ನು ಅರಣ್ಯ ಇಲಾಖೆಯೇ ಭರಿಸಬೇಕು. ಕಾಡಾನೆ ಹಾವಳಿ ನಿಯಂತ್ರಣಕ್ಕೆ ಕೈಗೊಳ್ಳುವ ಕಾರ್ಯಾಚರಣೆಯ ಮಾದರಿಯಲ್ಲಿಯೇ ಕಾಡೆಮ್ಮೆ ಸೇರಿ ಇತರ ವನ್ಯಜೀವಿಗಳಿಂದಲೂ ರೈತರ ಜೀವ ಮತ್ತು ಬೆಳೆ ರಕ್ಷಣೆಗೆ ಅರಣ್ಯ ಇಲಾಖೆ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕೆಂದರು.

ಮಲೆನಾಡು ಭಾಗದಲ್ಲಿ ರೈತರು ಜಮೀನುಗಳಿಗೆ ತೆರಳುವುದಕ್ಕೂ ಆತಂಕಪಡುವ ಪರಿಸ್ಥಿತಿ ನಿರ್ಮಾಣವಾಗಬಾರದು. ಇಂತಹ ಘಟನೆಗಳು ಮರುಕಳಿಸದಂತೆ ವನ್ಯಜೀವಿಗಳ ಚಲನ ವಲನದ ಮೇಲೆ ನಿಗಾ ಇಟ್ಟು, ಸೂಕ್ತ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

# ಪ್ರಜಾ ಸೇವೆ ಆಂದೋಲನದಲ್ಲಿ 1,076 ಅರ್ಜಿ ಸಲ್ಲಿಕೆ

## ಕಂದಾಯ ಇಲಾಖೆ ಸಮಸ್ಯೆಗಳೇ ಅಧಿಕ | 62 ಅರ್ಜಿಗೆ ಸ್ಥಳದಲ್ಲೇ ಪರಿಹಾರ

• ಪ್ರಜೋದಯ ವರದಿ

**ಹಾಸನ:** ರಾಜ್ಯದಲ್ಲಿ ಆಡಳಿತಾತ್ಮಕ ದಕ್ಷತೆ ಹೆಚ್ಚಿಸುವ ಹಾಗು ಸಾರ್ವಜನಿಕ ಅಹವಾಲುಗಳನ್ನು ಒಂದೇ ಸೂರಿನಡಿ ತ್ವರಿತವಾಗಿ ವಿಲೇವಾರಿ ಮಾಡುವ ಉದ್ದೇಶದಿಂದ ಪ್ರಾರಂಭಿಸಿರುವ ಪ್ರಜಾ ಸೇವೆ ಆಂದೋಲನಕ್ಕೆ ಭರ್ಜರಿ ಸ್ಪಂದನೆ ಸಿಕ್ಕಿದ್ದು, ಒಟ್ಟು 1076 ಅರ್ಜಿ ಸ್ವೀಕೃತಗೊಂಡಿವೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶನಿವಾರ ಬೆಳಿಗ್ಗೆ 11.30 ರಿಂದ ರಾತ್ರಿ 9 ಗಂಟೆವರೆಗೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ, ಸಂಸದ ಶ್ರೇಯಸ್ ಪಟೇಲ್ ಹಾಗು ಜಿಲ್ಲಾಮಟ್ಟದ ಅಧಿಕಾರಿಗಳು ಸಾರ್ವಜನಿಕರ ಅಹವಾಲುಗಳನ್ನು ಸಾವಧಾನದಿಂದ ಆಲಿಸಿ ನೆರವಿನ ಭರವಸೆ ನೀಡಿದರು.

ಸಾರ್ವಜನಿಕರು ತಮ್ಮ ಕೆಲಸಗಳಿಗೆ ಸರ್ಕಾರಿ ಕಚೇರಿ ಅಥವಾ ಜನಪ್ರತಿನಿಧಿಗಳ ಮನೆ ಬಾಗಿಲಿಗೆ ಅಲೆಯುವುದನ್ನು ತಪ್ಪಿಸುವ ಧ್ಯೇಯೋದ್ದೇಶದಿಂದ ಪ್ರಾರಂಭವಾಗಿರುವ ಆಂದೋಲನಕ್ಕೆ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ. ತಡರಾತ್ರಿವರೆಗೂ ಸಚಿವರು ಅಧಿಕಾರಿಗಳೊಂದಿಗೆ ಹಾಜರಿದ್ದು, ನೊಂದವರಿಗೆ ಧ್ವನಿಯಾಗುವ ಮೂಲಕ ಭರವಸೆಯ ಬೆಳಕು ಮೂಡಿಸಿದ್ದಾರೆ.

**ಕಂದಾಯ ಇಲಾಖೆ ಸಮಸ್ಯೆಗಳೇ ಅಧಿಕ**

ಹಾಸನದಲ್ಲಿ ನಡೆದ ಪ್ರಜಾ ಸೇವಾ ಆಂದೋಲನದಲ್ಲಿ ಒಟ್ಟು 1076 ಅರ್ಜಿ



> **ಪ್ರಜಾ ಸೇವೆ ಆಂದೋಲನ ದೇಶಕ್ಕೆ ಮಾದರಿಯಾಗಿದೆ. ಪ್ರತಿ ತಿಂಗಳು ಈ ಕಾರ್ಯಕ್ರಮ ನಡೆಯಲಿದೆ. ಸಾರ್ವಜನಿಕರು ಯಾವುದೇ ಆತಂಕವಿಲ್ಲದೆ ತಮ್ಮ ಅಹವಾಲು ಸಲ್ಲಿಸಬೇಕು. ಸರ್ವರ ಏಳಿಗೆ ದೃಷ್ಟಿಯಿಂದ ನೂತನ ಪ್ರಯೋಗವನ್ನು ರಾಜ್ಯದಲ್ಲಿ ಜಾರಿಗೊಳಿಸಲಾಗಿದೆ.**
> **-ಕೆ.ಎಂ.ಶಿವಲಿಂಗೇಗೌಡ, ಜಿಲ್ಲಾ ಉಸ್ತುವಾರಿ ಸಚಿವ**

ಸ್ವೀಕರಿಸಲಾಗಿದ್ದು, ಸ್ಥಳದಲ್ಲಿಯೇ 62 ಅರ್ಜಿಗೆ ಪರಿಹಾರ ಕಲ್ಪಿಸಲಾಗಿದೆ. ಉಳಿದ ಅರ್ಜಿಗಳ ವಿಲೇವಾರಿಗೆ 15 ದಿನಗಳ ಗಡುವು ನೀಡಲಾಗಿದೆ. ಕೆಲವು ಸಮಸ್ಯೆಗಳ ಪರಿಹಾರಕ್ಕೆ ಎರಡು ತಿಂಗಳ ಕಾಲಾವಕಾಶ ಕಲ್ಪಿಸಲಾಗಿದೆ. ಎರಡು ತಿಂಗಳ ಬಳಿಕ ಈ ಅರ್ಜಿಗಳಿಗೆ ಸಂಬಂಧಿಸಿ ಪ್ರಗತಿ ಪರಿಶೀಲನೆ ನಡೆಸುವುದಾಗಿ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರು ತಿಳಿಸಿದ್ದಾರೆ. ಸಲ್ಲಿಕೆಯಾದ ಅರ್ಜಿಯಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿ 619 ಅರ್ಜಿಗಳು ಸಲ್ಲಿಕೆಯಾಗಿವೆ. ಜಮೀನಿಗೆ ಹಕ್ಕು ಪತ್ರ, ದುರಸ್ತು, ಹದ್ದುಬಸ್ತು, ಖಾತೆಗೆ ಸಂಬಂಧಿಸಿದ ಸಮಸ್ಯೆಗಳು ಹೆಚ್ಚಿನ ಸಂಖ್ಯೆಯಲ್ಲಿ ಕಂಡುಬಂದವು.

**ಇಲಾಖಾವಾರು ಅರ್ಜಿ ಸಂಖ್ಯೆ**

ಕೃಷಿ ಇಲಾಖೆಗೆ ಸಂಬಂಧಿಸಿ-6, ಪಶುಪಾಲನಾ ಇಲಾಖೆ-4, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ-4, ಕೈಗಾರಿಕಾ ಮಂಡಳಿ-9, ಸಹಕಾರ ಇಲಾಖೆ-1, ಶಾಲಾ ಶಿಕ್ಷಣ ಇಲಾಖೆ-4, ಸಮಾಜ ಕಲ್ಯಾಣ ಇಲಾಖೆ-3, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ-34, ಜಿಪಿಎಆರ್(ಇ-ಗೌರ್ನಮೆಂಟ್)-2, ಇಂಧನ-24, ಹಣಕಾಸು ಇಲಾಖೆ-7, ಆಹಾರ ಮತ್ತು ನಾಗರಿಕ-31, ಅರಣ್ಯ ಇಲಾಖೆ-12, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ-7, ಉನ್ನತ ಶಿಕ್ಷಣ-1, ಗೃಹ ಇಲಾಖೆ-9, ತೋಟಗಾರಿಕೆ ಇಲಾಖೆ-1, ಗೃಹ ಮಂಡಳಿ-3, ಕಾರ್ಮಿಕ ಇಲಾಖೆ-10, ಕಾನೂನು-1, ವೈದ್ಯಕೀಯ ಶಿಕ್ಷಣ-7, ಸಣ್ಣ ನೀರಾವರಿ-5, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ-2, ಪಬ್ಲಿಕ್ ವರ್ಕ್ಸ್-9, ಕಂದಾಯ-619, ಗ್ರಾಮೀಣ ಮತ್ತು ಪಂಚಾಯತ್ ರಾಜ್ ಇಲಾಖೆ-162, ಅನುಸೂಚಿತ ಆದಿವಾಸಿಗಳಿಗೆ ಸಂಬಂಧಿಸಿ-3, ಕೌಶಲಾಭಿವೃದ್ಧಿ-1, ಸಾರಿಗೆ ಇಲಾಖೆ-18, ನಗರಾಭಿವೃದ್ಧಿ 70, ನೀರು ಸರಬರಾಜು ಮಂಡಳಿ-6, ಕ್ರೀಡಾ ಮತ್ತು ಯುವ ಸಬಲೀಕರಣ ಇಲಾಖೆ-1 ಹೀಗೆ ಒಟ್ಟು 1076 ಅರ್ಜಿ ಸಲ್ಲಿಕೆಯಾಗಿವೆ.

ಶನಿವಾರ ನಡೆದ ಸಭೆಯ ಮಧ್ಯೆಯೇ ವಿಡಿಯೊ ಮೂಲಕ ಭಾಗವಹಿಸಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸಲ್ಲಿಕೆಯಾಗಿರುವ ಹಾಗು ವಿಲೇವಾರಿ ಮಾಡಲಾದ ಅರ್ಜಿಗಳ ಮಾಹಿತಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದರು. ಆ ನಿಟ್ಟಿನಲ್ಲಿ ತಡರಾತ್ರಿಯೇ ಮುಖ್ಯಮಂತ್ರಿ ಕಚೇರಿಗೆ ಅಧಿಕಾರಿಗಳು ಪೂರ್ಣ ಮಾಹಿತಿ ಸಲ್ಲಿಸಿದ್ದಾರೆ.

### ಸಮಯಕ್ಕೂ ಮೊದಲೇ ಬಾರ್ ಓಪನ್

ತಾಲ್ಲೂಕಿನ ಬಹುತೇಕ ಕಡೆ ಸಮಯಕ್ಕೂ ಮೊದಲೇ ಮದ್ಯದಂಗಡಿಗಳು ಬಾಗಿಲು ತೆರೆಯುತ್ತವೆ. ಬೆಳಿಗ್ಗೆ 6 ಗಂಟೆಗೆ ತೆರೆಯುವುದರಿಂದ ಮದ್ಯ ಪ್ರಿಯರು ಕುಡಿತದ ದಾಸರಾಗುತ್ತಿದ್ದಾರೆ. ಸರ್ಕಾರ ನಿಗದಿಪಡಿಸಿರುವ ಸಮಯಕ್ಕೆ ಬಾಗಿಲು ತೆರೆಯುವಂತೆ ನಿರ್ದೇಶಿಸಬೇಕೆಂದು ಸಾರ್ವಜನಿಕರು ಅಬಕಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರಿಗೆ ಮನವಿ ಮಾಡಿದರು.

ಈ ವೇಳೆ ಮಾತನಾಡಿದ ಸಚಿವರು, ಬೆಳಿಗ್ಗೆ 10.30ಕ್ಕೆ ಬಾರ್ ಬಾಗಿಲು ತೆರೆಯಬೇಕು. ರಾತ್ರಿ 10.30ಕ್ಕೆ ಮುಚ್ಚಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳು ನಿಗಾ ವಹಿಸಬೇಕು. ನಿಯಮ ಉಲ್ಲಂಘಿಸಿದರೆ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗುವುದೆಂದು ಎಚ್ಚರಿಕೆ ನೀಡಿದರು.

## ಮದಗಜಗಳ ಕಾಳಗ: ಮನೆ ಮೇಲೆ ಉರುಳಿದ ಮರ

• ಪ್ರಜೋದಯ ವರದಿ

**ಬೇಲೂರು:** ಎರಡು ಕಾಡಾನೆಗಳ ಭೀಕರ ಕಾದಾಟದಿಂದ ಮರಗಳು ವಾಸದ ಮನೆ ಮೇಲೆ ಬಿದ್ದು ಹಾನಿ ಸಂಭವಿಸಿರುವ ಘಟನೆ ತಾಲ್ಲೂಕಿನ ಕೌರಿ ಗ್ರಾಮದಲ್ಲಿ ಭಾನುವಾರ ನಡೆದಿದೆ.

ಪುಟ್ಟಮ್ಮ ಎಂಬುವವರ ಮನೆಯ ಸಮೀಪವೇ ಸುಮಾರು 13 ಕಾಡಾನೆಗಳು ಬೀಡು ಬಿಟ್ಟಿದ್ದು, ಅವುಗಳ ಪೈಕಿ ಎರಡು ಸಲಗಗಳು ಮದದಲ್ಲಿವೆ. ಈ ಎರಡು ಆನೆಗಳು ಬೆಳಿಗ್ಗೆಯಿಂದ ಕಾದಾಡುತ್ತಿದ್ದವು. ಕಾಳಗದ ರಭಸಕ್ಕೆ ಮರಗಳು ಮುರಿದು ಮನೆಯ ಮೇಲೆ ಉರುಳಿವೆ. ಘಟನೆಯಿಂದ ಮನೆಯ ಕಟ್ಟಡಕ್ಕೆ ಹಾನಿಯಾಗಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ.

ವಿಷಯ ತಿಳಿದು ಸ್ಥಳಕ್ಕೆ ಇಟಿಎಫ್ (ಆನೆ ಕಾರ್ಯಪಡೆ) ಸಿಬ್ಬಂದಿ ಧಾವಿಸಿ ಪರಿಶೀಲನೆ ನಡೆಸಿದರು. ಮುನ್ನೆಚ್ಚರಿಕಾ



ಕ್ರಮವಾಗಿ ಪುಟ್ಟಮ್ಮ ಅವರ ಕುಟುಂಬವನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ.

ಎರಡು ಮದಗಜಗಳು ಪದೇ ಪದೆ ಕಾಳಗಕ್ಕೆ ಇಳಿಯುತ್ತಿರುವ ಹಿನ್ನಲೆಯಲ್ಲಿ ಅವುಗಳನ್ನು ನಿಯಂತ್ರಿಸಲು ಇಟಿಎಫ್ ಸಿಬ್ಬಂದಿ ಹರಸಾಹಸಪಡುತ್ತಿದ್ದಾರೆ. ಆನೆಗಳ ಚಲನವಲನದ ಮೇಲೆ ನಿಗಾ ಇರಿಸಲಾಗಿದ್ದು, ಕೌರಿ ಗ್ರಾಮದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಗ್ರಾಮಸ್ಥರಿಗೆ ಎಚ್ಚರಿಕೆ ನೀಡಲಾಗಿದೆ.

ಅರಣ್ಯ ಇಲಾಖೆ ಸಿಬ್ಬಂದಿ ಮೈಕ್ ಮೂಲಕ ಗ್ರಾಮದಲ್ಲಿ ಸಾರ್ವಜನಿಕರಿಗೆ ಮಾಹಿತಿ ನೀಡುತ್ತಿದ್ದು, ಅನಗತ್ಯವಾಗಿ ಹೊರಗೆ ಸಂಚರಿಸದಂತೆ ಹಾಗು ಆನೆಗಳಿರುವ ಪ್ರದೇಶಗಳಿಗೆ ತೆರಳದಂತೆ ಸೂಚಿಸಿದ್ದಾರೆ. ವಿಶೇಷವಾಗಿ ಕಾಫಿ ತೋಟಗಳಿಗೆ ಕಾರ್ಮಿಕರು ತೆರಳುವ ಮುನ್ನ ಅರಣ್ಯ ಇಲಾಖೆ ಅಥವಾ ಇಟಿಎಫ್ ಸಿಬ್ಬಂದಿಯಿಂದ ಆನೆಗಳ ಚಲನವಲನದ ಕುರಿತು ಮಾಹಿತಿ ಪಡೆದುಕೊಳ್ಳುವಂತೆ ಸಲಹೆ ನೀಡಿದ್ದಾರೆ.

## ಇಂದು ಗೋವಿಂದೇಗೌಡರ ಶತಮಾನೋತ್ಸವ

• ಪ್ರಜೋದಯ ವರದಿ

**ಹಾಸನ:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ವೈಜ್ಞಾನಿಕ ಮತ್ತು ಸಂಶೋಧನಾ ಪರಿಷತ್ ಜಿಲ್ಲಾ ಘಟಕದಿಂದ ಸೆ. 7ರ ಸೋಮವಾರ ಬೆಳಿಗ್ಗೆ 11 ಗಂಟೆಗೆ ಎಂ.ಜಿ. ರಸ್ತೆಯ ಗಾಂಧಿ ಭವನದಲ್ಲಿ ಮಲೆನಾಡ ಗಾಂಧಿ, ಮಾಜಿ ಶಿಕ್ಷಣ ಸಚಿವ ಹೆಚ್.ಜಿ.ಗೋವಿಂದೇಗೌಡರ ಶತಮಾನೋತ್ಸವ ಸಮಾರಂಭ ಏರ್ಪಡಿಸಲಾಗಿದೆ.

ಶಾಸಕ ಹೆಚ್.ಪಿ.ಸ್ವರೂಪ್ ಸಮಾರಂಭ ಉದ್ಘಾಟಿಸುವರು. ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಗೋವಿಂದೇಗೌಡರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವರು. ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ ಅಧ್ಯಕ್ಷತೆ ವಹಿಸುವರು. ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಹೆಚ್.ಬಿ. ಮದನಗೌಡ ಪ್ರಾಸ್ತಾವಿಕವಾಗಿ ಮಾತನಾಡುವರು. ವೈಜ್ಞಾನಿಕ ಮತ್ತು ಸಂಶೋಧನಾ ಪರಿಷತ್ ಅಧ್ಯಕ್ಷ ರವಿ ನಾಕಲಗೂಡು, ಲಯನ್ಸ್ ಮಾಜಿ ರಾಜ್ಯಪಾಲ ಹೆಚ್.ಜಿ.ವೆಂಕಟೇಶ್, ಸುಧೀರ್ ಕುಮಾರ್ ಮುರೊಳ್ಳಿ, ಕೆಪಿಎಸ್ ಪ್ರಮೋದ್, ಬಿ.ಪಿ.ಕೃಷ್ಣೇಗೌಡ, ಕೃಷ್ಣಮೂರ್ತಿ ಪಾಲ್ಗೊಳ್ಳಲಿದ್ದಾರೆ.

# ಗಣೇಶ ಮೂರ್ತಿ ಪ್ರತಿಷ್ಠಾಪನೆ ಸಿದ್ಧತೆ ಜೋರು



**ಜಿಲ್ಲೆಗೆ ಬರುತ್ತಿವೆ ಬಗೆ ಬಗೆಯ ಮೂರ್ತಿಗಳು ಪರಿಸರ ಪ್ರೇಮಕ್ಕಾಗಿ ಇಂದು ಮ್ಯಾರಾಥಾನ್**

-ಮಲ್ಲಿಕಾರ್ಜುನ ಕೊಚ್ಚರಗಿ

• ಪ್ರಜೋದಯ ವರದಿ

**ಹಾಸನ:** ಗಣೇಶ ಚತುರ್ಥಿ ಸಂಭ್ರಮಕ್ಕೆ ದಿನಗಣನೆ ಆರಂಭವಾಗಿದ್ದು, ಜಿಲ್ಲಾದ್ಯಂತ ಹಬ್ಬದ ಸಿದ್ಧತೆ ಜೋರಾಗಿದೆ.

ಸಾರ್ವಜನಿಕ ಗಣೇಶ ಮೂರ್ತಿಗಳು ಹೊರ ರಾಜ್ಯಗಳಿಂದ ಈಗಾಗಲೇ ಬರಲಾರಂಭಿಸಿದ್ದು, ಸಂಭ್ರಮದ ವಾತಾವರಣ ಮನೆ ಮಾಡಿದೆ. ಬೃಹದಾಕಾರದ ಗಣೇಶ ಮೂರ್ತಿಗಳ ಸ್ವಾಗತಕ್ಕಾಗಿ ಅದ್ದೂರಿ ಮೆರವಣಿಗೆಗಳು ಜನಮನ ಸೆಳೆಯುತ್ತಿದೆ. ಗೌರಿ-ಗಣೇಶ ಹಬ್ಬದ ಸಂಭ್ರಮ ಈಗಾಗಲೇ ಮೇಳೈಸಿದೆ.

ಸೆ.14ಕ್ಕೆ ಗೌರಿ-ಗಣೇಶ ಹಬ್ಬವಿದ್ದು, ಸಾರ್ವಜನಿಕ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಲು ಸಾಕಷ್ಟು ಹಣ ವ್ಯಯ ಮಾಡಲಾಗುತ್ತಿದೆ. ನಗರದ ಉದಯಗಿರಿ ಬಡಾವಣೆಯ ಸಾಮ್ರಾಟ್ ಗಣೇಶ ಈ ಬಾರಿ 23 ಅಡಿ ಎತ್ತರವಿದ್ದು, 3.10 ಲ.ರೂ. ನೀಡಿ ಖರೀದಿಸಲಾಗಿದೆ. ಕಳೆದ ವಾರ ಹೈದರಾಬಾದ್‌ನಿಂದ ನಗರ ಪ್ರವೇಶಿಸಿದ ಗಣೇಶ ಮೂರ್ತಿಗೆ ಬೂವನಹಳ್ಳಿ ಕ್ರಾಸ್‌ನಿಂದಲೇ ಅದ್ದೂರಿ ಮೆರವಣಿಗೆ ಮಾಡಲಾಯಿತು. ಸಾರ್ವಜನಿಕ ಗಣೇಶ ಪ್ರತಿಷ್ಠಾಪನೆಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಲೇ ಇದೆ.

ಗಣೇಶನಿಗೆ ಸಾಮ್ರಾಟ್ ಗಣೇಶ, ಹೇಮಾವತಿ ನಗರದ ಗಣೇಶ, ಹಾಸನ ಮಹಾರಾಜ, ವಿದ್ಯಾನಗರ ಗಣೇಶ, ಮಹಾಗಣಪತಿ ಹೀಗೆ ಆಕರ್ಷಕ ಹೆಸರು ಇಟ್ಟು ಅದ್ದೂರಿಯಾಗಿ ಗಣೇಶನನ್ನು ಪ್ರತಿಷ್ಠಾಪಿಸಲಾಗುತ್ತಿದೆ. ಕಾರ್ಯಕ್ರಮ ಆಯೋಜನೆ, ಪ್ರಸಾದ ವಿನಿಯೋಗ, ಅನ್ನದಾಸೋಹ ಹೆಸರಿನಲ್ಲಿ ಕೋಟ್ಯಾಂತರ ರೂಪಾಯಿ ಖರ್ಚು ಮಾಡಲಾಗುತ್ತಿದೆ.

ಜನಪ್ರತಿನಿಧಿಗಳ ನೇತೃತ್ವ ರಾಜಕೀಯ ಲೆಕ್ಕಾಚಾರ

ನಗರ ಮತ್ತು ಗ್ರಾಮೀಣ ಭಾಗದಲ್ಲಿ ಬೃಹದಾಕಾರದ ಗಣೇಶ ಮೂರ್ತಿಗಳು ಪ್ರತಿಷ್ಠಾಪನೆ ಆಗುತ್ತಿವೆ ಎಂದರೆ ಅದಕ್ಕೆ ಜನಪ್ರತಿನಿಧಿಗಳ ಸಂಪೂರ್ಣ ಬೆಂಬಲ ಇದ್ದೇ ಇದೆ. 2028ರ ವಿಧಾನಸಭೆ ಚುನಾವಣೆಗೆ ಇನ್ನೇನು ಒಂದೂವರೆ ವರ್ಷ ಬಾಕಿ ಇದೆ. ಅದರ ನಡುವೆ ಗ್ರಾಮ ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಚುನಾವಣೆ ನಡೆಯುವ ಸಾಧ್ಯತೆಯೂ ಇದೆ. ಇದೆಲ್ಲದರ ಲೆಕ್ಕಾಚಾರದಲ್ಲೇ ಈ ಬಾರಿ ಸಾರ್ವಜನಿಕ ಗೌರಿ-ಗಣೇಶದ ಲೆಕ್ಕಾಚಾರವೂ ಜೋರಾಗಿಯೇ ಇದೆ.

ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು, ಶಾಸಕರು, ಟಿಕೆಟ್ ಆಕಾಂಕ್ಷಿಗಳು, ಜನಪ್ರತಿನಿಧಿಗಳು ಗಣೇಶನಿಗೆ ಬಂಡವಾಳ ಹೂಡಿ ಮತದಾರರನ್ನು, ಯುವಕರನ್ನು ಆಕರ್ಷಿಸಲು ಮುಂದಾಗಿರುವುದು ಗುಟ್ಟಾಗಿ ಉಳಿದಿಲ್ಲ.

### ಪರಿಸರ ಕಾಳಜಿಯೂ ಮುಖ್ಯ

ಪರಿಸರ ಸ್ನೇಹಿಯಾಗಿ ಗೌರಿ-ಗಣೇಶ ಹಬ್ಬ ಆಚರಿಸುವ ಉದ್ದೇಶದಿಂದ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ಹಾಗು ರಾಸಾಯನಿಕ ವಸ್ತುಗಳಿಂದ ಗಣೇಶ ಮೂರ್ತಿಗಳ ತಯಾರಿಕೆ, ಸಂಗ್ರಹಣೆ, ಮಾರಾಟ, ವಿಸರ್ಜನೆಗೆ ಜಿಲ್ಲಾಡಳಿತ ಸೂಚನೆ ನೀಡಿದೆಯಾದರೂ ಪರಿಸರ ಸ್ನೇಹಿ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ಪೂರ್ಣ ಪ್ರಮಾಣದಲ್ಲಿ ಸಾಧ್ಯವಾಗುತ್ತಿಲ್ಲ.

ನಿಷೇಧಿತ ಗಣೇಶ ಮೂರ್ತಿಗಳ ತಯಾರಿಕೆ ಅಥವಾ ಮಾರಾಟ ಕಂಡುಬಂದಲ್ಲಿ ಕಾನೂನು ಕ್ರಮದ ಎಚ್ಚರಿಕೆಯನ್ನು ಈಗಾಗಲೇ ನೀಡಲಾಗಿದೆ. ಆದರೆ ಜಿಲ್ಲಾದ್ಯಂತ ಪಿಒಪಿ ಗಣೇಶ ಮೂರ್ತಿಗಳ ಅಬ್ಬರ ಜೋರಾಗಿಯೇ ಇದೆ. ಇದಕ್ಕೆ ಸಂಪೂರ್ಣ ಕಡಿವಾಣ ಅಸಾಧ್ಯ ಎಂಬಂತಾಗಿದೆ. ಗಣೇಶ ಹಬ್ಬದ ಹಿನ್ನಲೆಯಲ್ಲಿ ಜಿಲ್ಲಾಡಳಿತದ ಸಹಯೋಗದಲ್ಲಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಹಾಸನ ಪ್ರಾದೇಶಿಕ ಕಚೇರಿ ವತಿಯಿಂದ ಸೆ.7ರ ಸೋಮವಾರ ಬೆಳಿಗ್ಗೆ 7 ಗಂಟೆಗೆ ಜಿಲ್ಲಾಧಿಕಾರಿ ಕಚೇರಿಯಿಂದ ಜಿಲ್ಲಾ ಕ್ರೀಡಾಂಗಣದವರೆಗೆ ಪರಿಸರ ಸ್ನೇಹಿ ಮ್ಯಾರಾಥಾನ್ ಆಯೋಜಿಸಲಾಗಿದ್ದು, ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಮಣ್ಣಿನ ಗಣೇಶ ಮೂರ್ತಿ ತಯಾರಿಸುವ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ.

ವರ್ಷದಿಂದ ವರ್ಷಕ್ಕೆ ಸಾರ್ವಜನಿಕ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ಹೆಚ್ಚುವ ಜೊತೆಗೆ ಅದ್ದೂರಿತನವೂ ಹೆಚ್ಚುತ್ತಿದೆ.

ಶಾಂತಿ ಕದಡದಿರಲಿ ಸಂಭ್ರಮ

ಇತ್ತೀಚೆಗೆ ಗಣೇಶೋತ್ಸವವು ಭಕ್ತಿ ಭಾವದ ಪ್ರತೀಕವಾಗದೆ ಧರ್ಮ, ರಾಜಕೀಯ ದಾಳವಾಗಿ ಬದಲಾಗುತ್ತಿದೆ. ಸ್ವಾತಂತ್ರ್ಯ ಸಂಗ್ರಾಮ ಸಂದರ್ಭದಲ್ಲಿ ದೇಶಪ್ರೇಮಿಗಳನ್ನು ಒಗ್ಗೂಡಿಸುವ ಉದ್ದೇಶದಿಂದ ಹೋರಾಟಗಾರ ಬಾಲ ಗಂಗಾಧರ ತಿಲಕ್ ಅವರು ಗಣೇಶೋತ್ಸವವನ್ನು ವೇದಿಕೆಯಾಗಿ ಬಳಸಿದರು. ಆದರೆ, ಈಗ ಉತ್ಸವದ ಹೆಸರಿನಲ್ಲಿ ಸಂಭ್ರಮದಿಂದ ಇರುವ ಬದಲು ಶಾಂತಿ ಕದಡುವ ವೇದಿಕೆಯಾಗಿ ಮಾರ್ಪಾಡಾಗಿದೆ. ಕಳೆದ ವರ್ಷ ಗಣೇಶ ವಿಸರ್ಜನೆ ವೇಳೆ ಮೆರವಣಿಗೆಗೆ ಅವಕಾಶ ನೀಡಲಿಲ್ಲ, ಹೆಚ್ಚುವರಿ ಸಮಯ ನೀಡುತ್ತಿಲ್ಲವೆಂದು ಯುವಕರು ಪೊಲೀಸರೊಂದಿಗೆ ವಾಗ್ವಾದಕ್ಕಿಳಿದರು. ಇನ್ನು ಯುವಕರು ಇಲ್ಲಿ ಭಕ್ತಿಗಿಂತ ವೈಯಕ್ತಿಕ ಪ್ರತಿಷ್ಠೆಯನ್ನು ಪ್ರದರ್ಶನಕ್ಕಿಡುತ್ತಾರೆ. ಇಂತಹ ಅಶಾಂತಿಗೆ ಗಣೇಶನ ಹೆಸರು ಬಳಕೆಯಾಗಬಾರದೆಂಬುದು ಪ್ರಜ್ಞಾವಂತ ನಾಗರಿಕರ ಸಲಹೆ.

## ಹಳ್ಳಿಮೈಸೂರಿಗೆ ಶಾಂತಿಗ್ರಾಮ ಹಾಸ್ಟೆಲ್ ಮಕ್ಕಳ ಸ್ಥಳಾಂತರ

• ಪ್ರಜೋದಯ ವರದಿ

**ಹಾಸನ:** ದನದ ಕೊಟ್ಟಿಗೆಯಂತಹ ಶೆಡ್‌ನಲ್ಲಿ ಕಾರ್ಯನಿರ್ವಹಿಸುತ್ತಿದ್ದ ಶಾಂತಿಗ್ರಾಮದ ಸಮಾಜ ಕಲ್ಯಾಣ ಇಲಾಖೆ ಅಧೀನದ ವಸತಿ ನಿಲಯವನ್ನು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರ ಸೂಚನೆ ಮೇರೆಗೆ ಭಾನುವಾರ ಹಳ್ಳಿಮೈಸೂರಿಗೆ ಸ್ಥಳಾಂತರಿಸಲಾಯಿತು.

ಬಾಡಿಗೆ ಕಟ್ಟಡವೊಂದರಲ್ಲಿ ಕಳೆದ ಐದು ವರ್ಷಗಳಿಂದ ವಸತಿ ಶಾಲೆ ನಡೆಯುತ್ತಿತ್ತು. 172 ಮಕ್ಕಳು ಇಕ್ಕಟ್ಟು ಜಾಗದಲ್ಲಿ ವಾಸ್ತವ್ಯ ಹೂಡಿದ್ದರು. ಶನಿವಾರ ನಡೆದ ಪ್ರಜಾ ಸೇವೆ ಆಂದೋಲನದಲ್ಲಿ ವಿಷಯ ಪ್ರಸ್ತಾಪಿಸಿದ್ದ ಸಚಿವ ಶಿವಲಿಂಗೇಗೌಡ ಅವರು ವಾರದೊಳಗೆ ಬೇರೆ ಕಟ್ಟಡಕ್ಕೆ ಮಕ್ಕಳನ್ನು ಸ್ಥಳಾಂತರಿಸಬೇಕೆಂದು ಖಡಕ್ ಸೂಚನೆ ನೀಡಿದ್ದರು. ಈ ಹಿನ್ನಲೆಯಲ್ಲಿ ಭಾನುವಾರ ಸ್ಥಳಕ್ಕೆ ತೆರಳಿದ್ದ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಪಿ.ದೂದ್‌ಪೀರ್, ಶಾಂತಿಗ್ರಾಮ ಪೊಲೀಸರು



ವಸತಿ ನಿಲಯ ಮಕ್ಕಳನ್ನು ಹಳ್ಳಿಮೈಸೂರಿನ ಸ್ವಂತ ಕಟ್ಟಡಕ್ಕೆ ಸ್ಥಳಾಂತರ ಮಾಡಿದರು.

**ಪೋಷಕರು-ಮಕ್ಕಳ ಪ್ರತಿಭಟನೆ**

ಶಾಂತಿಗ್ರಾಮದ ವಸತಿ ಶಾಲೆಯಲ್ಲೇ ಉತ್ತಮ ಶಿಕ್ಷಣ-ವಸತಿ ವ್ಯವಸ್ಥೆ ಇದ್ದು, ನಾವು ಬೇರೆ ಕಡೆಗೆ ಹೋಗುವುದಿಲ್ಲವೆಂದು ಮಕ್ಕಳು ಆಕ್ರೋಶ ವ್ಯಕ್ತಪಡಿಸಿದರು. ಮಕ್ಕಳಿಗೆ ಆಗದ ಸಮಸ್ಯೆ ಜಿಲ್ಲಾ ಉಸ್ತುವಾರಿ ಸಚಿವರು ಹಾಗು ಮಾಧ್ಯಮದವರಿಗೆ ಆಗುತ್ತಿರುವುದು ಏಕೆ. ನಮಗೆ ಇಲ್ಲಿ ಉತ್ತಮ ಶಿಕ್ಷಣ ಸಿಗುತ್ತಿದೆ. ಒಳ್ಳೆಯ ಫಲಿತಾಂಶವೂ ಬರುತ್ತಿದೆ. ಏಕಾಏಕಿ ಬೇರೆ ಕಡೆಗೆ ಕಳುಹಿಸಿದರೆ ಹೇಗೆಂದು ಪ್ರಶ್ನಿಸಿದರು. ಅದಕ್ಕೆ ಪೋಷಕರು ಧ್ವನಿಗೂಡಿಸಿ ಯಾವ ಕಾರಣಕ್ಕೂ ಮಕ್ಕಳನ್ನು ಹಳ್ಳಿಮೈಸೂರಿಗೆ ಕಳುಹಿಸುವುದಿಲ್ಲವೆಂದು ಪಟ್ಟು ಹಿಡಿದರು. ಈ ವೇಳೆ ಅಧಿಕಾರಿಗಳು ಹಾಗು ಪೋಷಕರ ನಡುವೆ ಜೋರು ವಾಗ್ವಾದ ನಡೆಯಿತು. ಸಂಜೆ ಬಳಿಕ ಮಕ್ಕಳನ್ನು ಖಾಸಗಿ ಬಸ್‌ಗಳ ಮೂಲಕ ಕರೆದೊಯ್ಯಲಾಯಿತು.

ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆಯ 172 ಮಕ್ಕಳು ಕಳೆದ ಐದು ವರ್ಷಗಳಿಂದ ದನದ ಕೊಟ್ಟಿಗೆಯಂತಿರುವ ಕಟ್ಟಡದಲ್ಲಿ ವಾಸಿಸುತ್ತಿದ್ದರು. 6ನೇ ತರಗತಿಯಿಂದ ಹತ್ತನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ಮಕ್ಕಳ ಪೈಕಿ 92 ಬಾಲಕರು ಹಾಗು 80 ಬಾಲಕಿಯರಿದ್ದಾರೆ.

ಮಕ್ಕಳಿಗೆ ಪ್ರತ್ಯೇಕ ವಸತಿ, ಅಧ್ಯಯನ ಹಾಗು ಊಟದ ವ್ಯವಸ್ಥೆ ಕಲ್ಪಿಸುವ ಬದಲು ಒಂದೇ ಸ್ಥಳದಲ್ಲಿ ಊಟ, ಅಲ್ಲಿಯೇ ಮಲಗುವುದು ಹಾಗು ಪಾಠ ಕೇಳಬೇಕಾದ ಪರಿಸ್ಥಿತಿ ನಿರ್ಮಾಣವಾಗಿತ್ತು. 92 ಬಾಲಕರಿಗೆ ಕೇವಲ 5 ಶೌಚಾಲಯ, ಬಾಲಕಿಯರಿಗೂ ಸುಸಜ್ಜಿತ ಶೌಚಗೃಹಗಳು ಇರಲಿಲ್ಲ. ಈ ಕುರಿತು ಮಾಧ್ಯಮಗಳಲ್ಲಿ ವರದಿ ಪ್ರಕಟವಾಗುತ್ತಿದ್ದಂತೆ ಅಧಿಕಾರಿಗಳು ಕ್ರಮ ಕೈಗೊಂಡಿದ್ದಾರೆ.

CMYK CMYK CMYK CMYK

# ಇರಾನ್ ತೈಲ ಟ್ಯಾಂಕರ್ ನಾಶಗೊಳಿಸಿದ ಅಮೇರಿಕಾ

## ವಿಡಿಯೋ ಬಿಡುಗಡೆ ಮಾಡಿದ ಸೆಂಟ್ರಲ್ ಕಮಾಂಡ್ | ಇರಾನ್ ತೀವ್ರ ಆಕ್ರೋಶ

• ಪ್ರಜೋದಯ ವರದಿ

**ವಾಷಿಂಗ್ಟನ್:** ಇರಾನ್ ವಿರುದ್ಧದ ತನ್ನ ಕಾರ್ಯಾಚರಣೆಯ ಭಾಗವಾಗಿ ಒಮಾನ್ ಕೊಲ್ಲಿಯಲ್ಲಿ ಅದರ (ಇರಾನ್) ತೈಲ ಟ್ಯಾಂಕರ್‌ವೊಂದನ್ನು ಮುಳುಗಿಸಿರುವುದಾಗಿ ಅಮೇರಿಕಾ ಸೇನೆಯ ಸೆಂಟ್ರಲ್ ಕಮಾಂಡ್ ಭಾನುವಾರ ಹೇಳಿದೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಸೆಂಟ್ರಲ್ ಕಮಾಂಡ್, ದೇಶದ ಯೋಧರ ನಿಖರ ಗುರಿ ಮತ್ತು ವೃತ್ತಿಪರತೆಗೆ ಧನ್ಯವಾದಗಳು. ಕೊಮೊರೊಸ್ ಧ್ವಜ ಹೊಂದಿದ್ದ ಎಂ/ಟಿ ಕೈಲೊ ಟ್ಯಾಂಕರ್ ಒಮಾನ್ ಕೊಲ್ಲಿಯಲ್ಲಿ ಮುಳುಗಿದ್ದು, ಸಮುದ್ರ ದಾಳದಲ್ಲಿ ಇರಾನ್‌ನ ನೌಕಾಪಡೆಯನ್ನು ಸೇರಿಕೊಂಡಿದೆ ಎಂದು ವ್ಯಂಗ್ಯವಾಡಿದೆ. ಟ್ಯಾಂಕರ್ ಮುಳುಗುವ ಮೊದಲು ಹೊಗೆ ಆವರಿಸಿರುವುದನ್ನು ವಿಡಿಯೋದಲ್ಲಿ ಕಾಣಬಹುದಾಗಿದೆ. ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ (ಐಆರ್‌ಜಿಸಿ) ಅಮೇರಿಕಾದ ಸಮರ ನೌಕೆಯನ್ನು ಗುರಿಯಾಗಿಸಿ ಕ್ಷಿಪಣಿ ದಾಳಿ ನಡೆಸಿತ್ತು. ಅದಕ್ಕೆ ಪ್ರತಿಯಾಗಿ ಅಮೇರಿಕಾ ಈ ಕ್ರಮ ಕೈಗೊಂಡಿದೆ. ಕಳೆದ 24 ಗಂಟೆಗಳಲ್ಲಿ ಎಂ/ಟಿ ಕೈಲೊ ಸೇರಿ ಇರಾನ್‌ನ ಮೂರು ತೈಲ ಟ್ಯಾಂಕರ್‌ಗಳನ್ನು ಗುರಿಯಾಗಿಸಲಾಗಿತ್ತು. ಎಂ/ಟಿ ಕೈಲೊ ಸಮುದ್ರದಲ್ಲಿ ಮುಳುಗಿದ್ದರೆ ಎಂ/ಟಿ ಡೌನಿ ಮತ್ತು ಎಂ/ಟಿ ಸ್ಟಾರ್ಕ್ 1 ನೌಕೆಗಳು ಹಾನಿಗೊಳಗಾಗಿವೆ ಎಂದು ವರದಿಯಾಗಿದೆ.

**ಇರಾನ್ ಆಕ್ರೋಶ**

ಅಮೇರಿಕಾದ ಮಿಲಿಟರಿ ಕ್ರಮಕ್ಕೆ ಇರಾನ್ ವಿದೇಶಾಂಗ ಸಚಿವಾಲಯ ತೀವ್ರ ಆಕ್ರೋಶ



ವ್ಯಕ್ತಪಡಿಸಿದ್ದು, ಅದನ್ನು ಅಕ್ರಮ ಮತ್ತು ಹೊಣೆಗೇಡಿತನದ ಕೃತ್ಯ ಎಂದು ಜರಿದಿದೆ. ಯಾವ ದೇಶದ ವಿರುದ್ಧ ಬಲಪ್ರಯೋಗ ಮಾಡು ವುದನ್ನು ಅಥವಾ ಬೆದರಿಕೆ ಹಾಕುವುದನ್ನು ನಿಷೇಧಿ ಸುವ ವಿಶ್ವಸಂಸ್ಥೆಯ ಚಾರ್ಟರ್‌ನ ವಿಧಿ 2(4) ಅನ್ನು ಅಮೇರಿಕಾ ಉಲ್ಲಂಘಿಸಿದೆ ಎಂದು ಕಿಡಿಕಾರಿದೆ.

ಅಮೇರಿಕಾ ನಡೆಸಿದ ಈ ದಾಳಿಗಳು ಯುದ್ಧ ಅಪರಾಧ ಆಗಿದ್ದು, ಅಂತಾರಾಷ್ಟ್ರೀಯ ಶಾಂತಿ, ಪ್ರಾದೇಶಿಕ ಭದ್ರತೆ ಮತ್ತು ಜಾಗತಿಕ ವ್ಯಾಪಾರಕ್ಕೆ ಸಂಚಕಾರ ತಂದೊಡ್ಡಿವೆ ಎಂದು ಇರಾನ್ ಆರೋಪಿಸಿದೆ. ಅಮೇರಿಕಾದ ಈ ಕಾರ್ಯಾಚರಣೆಯ ಬೆನ್ನಲ್ಲೇ, ಇರಾನ್‌ನ ಐಆರ್‌ಜಿಸಿ ಅಮೇರಿಕಾದ ಸಮರ ನೌಕೆಗಳ ಮೇಲೆ ಕ್ಷಿಪಣಿ ದಾಳಿ ನಡೆಸಿರುವುದಾಗಿ ಹೇಳಿಕೊಂಡಿದೆ. ಈ ದಾಳಿಯಿಂದ ಅಮೇರಿಕಾದ ಎರಡೂ ಯುದ್ಧ ನೌಕೆಗಳು ಹಾನಿಗೊಳಗಾಗಿದ್ದು, ಆ ಪ್ರದೇಶ ದಿಂದ ಕಾಲ್ಕಿತ್ತಿವೆ ಎಂದು ಪ್ರತಿಪಾದಿಸಿದೆ.

**ಜಾಗತಿಕ ತೈಲ ಮಾರುಕಟ್ಟೆಗೆ ಆತಂಕ**

ಅಮೇರಿಕಾ ತನ್ನ ಮಿಲಿಟರಿ ಕಾರ್ಯಾಚರಣೆಯನ್ನು ತೀವ್ರಗೊಳಿಸಿರುವ ಬೆನ್ನಲ್ಲೇ ಜಾಗತಿಕ ಮಟ್ಟದಲ್ಲಿ ತೈಲ ಪೂರೈಕೆ ಹಾಗು ಸಮುದ್ರ ಮಾರ್ಗದ ವ್ಯಾಪಾರ ಮೇಲೆ ಗಂಭೀರ ಪರಿಣಾಮ ಬೀರುವ ಆತಂಕ ಎದುರಾಗಿದೆ. ಪರ್ಷಿಯನ್ ಕೊಲ್ಲಿಯನ್ನು ಅರೇಬಿಯನ್ ಸಮುದ್ರದೊಂದಿಗೆ ಜೋಡಿಸುವ ಒಮಾನ್ ಕೊಲ್ಲಿ ಜಾಗತಿಕ ಇಂಧನ ಸಾಗಣೆಯ ಅತ್ಯಂತ ಪ್ರಮುಖ ಹಾಗು ಆಯಕಟ್ಟಿನ ಜಲಮಾರ್ಗವಾಗಿದೆ.

**ತೈಲ ಪೂರೈಕೆಗೆ ಧಕ್ಕೆ**

ಇಂಧನ ರಫ್ತು ಮಾರ್ಗದಲ್ಲೇ ವಾಣಿಜ್ಯ ನೌಕೆಗಳನ್ನು ಗುರಿಯಾಗಿಸಿ ದಾಳಿ ನಡೆಯುತ್ತಿರುವುದರಿಂದ, ಜಾಗತಿಕ ತೈಲ ಪೂರೈಕೆಯಲ್ಲಿ ತೀವ್ರ ವ್ಯತ್ಯಯ ಉಂಟಾಗುವ ಸಾಧ್ಯತೆಯಿದೆ.

ಈ ಭಾಗದಲ್ಲಿ ವಾಣಿಜ್ಯ ಹಡಗುಗಳ ಸಂಚಾರಕ್ಕೆ ಅಡಚಣೆಯಾದರೆ ಅದು ಕೇವಲ ಪ್ರಾದೇಶಿಕ ವ್ಯಾಪಾರಕ್ಕಷ್ಟೇ ಅಲ್ಲದೆ, ಅಂತಾರಾಷ್ಟ್ರೀಯ ಇಂಧನ ಮಾರುಕಟ್ಟೆಗಳಲ್ಲಿ ತೈಲ ಬೆಲೆ ಏರಿಕೆಗೆ ಕಾರಣವಾಗಿ ಜಾಗತಿಕ ಆರ್ಥಿಕತೆಯ ಮೇಲೆ ದುಷ್ಪರಿಣಾಮ ಬೀರಲಿದೆ.

**ಮತ್ತಷ್ಟು ದಾಳಿಯ ಎಚ್ಚರಿಕೆ**

ಮಧ್ಯಪ್ರದೇಶದ ಸಾಗರಗಳಲ್ಲಿ ಇರಾನ್‌ನ ತೈಲ ಟ್ಯಾಂಕರ್‌ಗಳ ಮೇಲೆ ದಾಳಿ ಹೆಚ್ಚಿಸುವ ಎಚ್ಚರಿಕೆ ನೀಡಿರುವ ಸೆಂಟ್ರಲ್ ಕಮಾಂಡ್ ಕಮಾಂಡರ್ ಅಡ್ಮಿರಲ್ ಬ್ರಾಡ್ ಕೂಪರ್, ಯುಎಸ್ ಸೈನ್ಯವು ತನ್ನನ್ನು ತಾನು ರಕ್ಷಿಸಿಕೊಳ್ಳಲು ಹಿಂಜರಿಯುವುದಿಲ್ಲ. ಅಗತ್ಯ ಬಿದ್ದರೆ ಅದು ಇರಾನ್‌ನ ಬಹಿರಂಗಪಡಿಸಿದ ತೈಲ ನೌಕಾಪಡೆಯನ್ನು ನಾಶಪಡಿಸಬಹುದೆಂದು ಹೇಳಿದ್ದಾರೆ.

ನೀವು ನಮ್ಮ ಎರಡು ಹಡಗುಗಳ ಮೇಲೆ ಗುಂಡು ಹಾರಿಸಿದರೆ, ನಾವು ಇನ್ನೂ ಹೆಚ್ಚಿನ ಆರ್ಥಿಕ ಹೊಡೆತವನ್ನು ನಿಮಗೆ ನೀಡುತ್ತೇವೆ. ನಾವು ಈಗಾಗಲೇ ನಿಮ್ಮ ಮೂರು ಹಡಗುಗಳನ್ನು ನಾಶಪಡಿಸಿದ್ದೇವೆಂದು ಕೂಪರ್ ಗುಡುಗಿದ್ದಾರೆ.

### ಈಗ್ಯಾಕೆ ಚುನಾವಣೆ ಪ್ರಶ್ನೆ: ಬಿಜೆಪಿ ನಾಯಕರ ಸವಾಲಿಗೆ ಜಾರಕಿಹೊಳಿ ಟಾಂಗ್

# ನಮ್ಮ ಸರ್ಕಾರಕ್ಕೆ 5 ವರ್ಷಗಳ ಜನಾದೇಶವಿದೆ

• ಪ್ರಜೋದಯ ವರದಿ

**ಹಾಸನ:** ಕಾಂಗ್ರೆಸ್ ಸರ್ಕಾರಕ್ಕೆ ಐದು ವರ್ಷಗಳ ಜನಾದೇಶವಿದೆ. ಹೀಗಿರುವಾಗ ಈಗಲೇ ಚುನಾವಣೆ ನಡೆಸುವ ಅಗತ್ಯವೇನಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಪ್ರಶ್ನಿಸಿದರು.

ನಗರದ ಕಾಂಗ್ರೆಸ್ ಮುಖಂಡ ಹೆಚ್.ಕೆ.ಮಹೇಶ್ ಅವರ ಮನೆಗೆ ಭೇಟಿ ನೀಡಿದ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿ, ಬಿಜೆಪಿ ನಡೆಸುತ್ತಿರುವ ಪಾದಯಾತ್ರೆ ಹಾಗು ಸರ್ಕಾರ ವಿಸರ್ಜಿಸಿ ಚುನಾವಣೆಗೆ ಬರುವಂತೆ ಬಿಜೆಪಿ ನಾಯಕರು ಹಾಕಿರುವ ಸವಾಲಿಗೆ ಪ್ರತಿಕ್ರಿಯಿಸಿದ ಅವರು, ನಮ್ಮನ್ನು ಜನರು ಐದು ವರ್ಷಗಳ ಅವಧಿಗೆ ಆಯ್ಕೆ ಮಾಡಿದ್ದಾರೆ. 2028ರಲ್ಲಿ ಚುನಾವಣೆ ನಡೆಯಲಿದೆ. ಆಗ ಅವರು ಇರುತ್ತಾರೆ, ನಾವೂ ಇರುತ್ತೇವೋ ಆಗ ನೋಡೋಣ. ಈಗ್ಯಾಕೆ ಚುನಾವಣೆ ಎಂದು ಪ್ರಶ್ನಿಸಿದ ಅವರು, ಬಿಜೆಪಿಗೆ ಪಾದಯಾತ್ರೆ ನಡೆಸುವ ಹಕ್ಕು ಇದೆ. ಅವರ ಪಕ್ಷ ಸ್ವತಂತ್ರವಾಗಿದ್ದು, ಅವರು ಪಾದಯಾತ್ರೆ ಮಾಡಿಕೊಳ್ಳಲಿ. ಅದಕ್ಕೆ ನಮ್ಮ ತಕರಾರಿಲ್ಲ ಎಂದರು.

**ದಾಖಲೆ ಬಿಡುಗಡೆ ಮಾಡಲಿ**

ದೇಶದಲ್ಲೇ ಅಲ್ಲೋಲ-ಕಲ್ಲೋಲವಾಗುವಂತಹ ವಿಚಾರವನ್ನು ಬಹಿರಂಗಪಡಿಸುವುದಾಗಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ನೀಡಿರುವ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಅವರು, ಆರೋಪ ಮಾಡಲು ಎಲ್ಲರಿಗೂ ಸ್ವಾತಂತ್ರ್ಯವಿದೆ. ಅವರ ಬಳಿ ದಾಖಲೆಗಳು ಹಾಗು ಸಂಬಂಧ ಪಟ್ಟ ಮಾಹಿತಿ ಇದ್ದರೆ ಬಿಡುಗಡೆ ಮಾಡಲಿ ಎಂದು ಸವಾಲು ಹಾಕಿದರು.



**ಶೀಘ್ರ ಮಹಿಳಾ ಸಚಿವರ ನೇಮಕ**

ರಾಜ್ಯ ಸಚಿವ ಸಂಪುಟಕ್ಕೆ ಶೀಘ್ರದಲ್ಲೇ ಮಹಿಳಾ ಸಚಿವರನ್ನು ನೇಮಕ ಮಾಡುವುದಾಗಿ ಮುಖ್ಯಮಂತ್ರಿ ಹೇಳಿದ್ದು, ಆ ಸ್ಥಾನವನ್ನು ಭರ್ತಿ ಮಾಡಲಾಗುವುದು. ಮಾಜಿ ಸಚಿವ ನಾಗೇಂದ್ರ ಅವರ ರಾಜೀನಾಮೆಯಿಂದ ತೆರವಾಗಿರುವ ಸ್ಥಾನವನ್ನು ಪರಿಶಿಷ್ಟ ಪಂಗಡದ ಸಮು ದಾಯದವರಿಗೆ ನೀಡಬೇಕು. ಈ ಸ್ಥಾನಕ್ಕೆ ಮೂವರು ಆಕಾಂಕ್ಷಿಗಳಿದ್ದು, ಯಾರಿಗೆ ಸಚಿವ ಸ್ಥಾನ ನೀಡಿದರೂ ಸ್ವಾಗತಿಸುವುದಾಗಿ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ಯಾರ ವಿರುದ್ಧವಾಗಲಿ ಅಥವಾ ಸರ್ಕಾರದ ವಿರುದ್ಧವಾಗಲಿ ಆರೋಪಗಳಿದ್ದರೆ ಅವುಗಳನ್ನು ಸೂಕ್ತ ರೀತಿಯಲ್ಲಿ ಮಂಡಿಸಲಿ. ಬಳಿಕ ಆ ಆರೋಪಗಳಿಂದ ಎಷ್ಟರಮಟ್ಟಿಗೆ ಪರಿಣಾಮ ಉಂಟಾಗುತ್ತದೆಂಬುದು ಗೊತ್ತಾಗಲಿದೆ. ಆರೋಪ ಮಾಡಿದ ನಂತರವೇ ಅದರ ಪರಿಣಾಮ ಹಾಗೂ ಮುಂದಿನ ಬೆಳವಣಿಗೆಗಳು ತಿಳಿಯಲಿವೆ ಎಂದರು.

**ಕೆಪಿಎಸ್‌ಸಿ ಹಗರಣದ ತನಿಖೆ ನಡೆಯುತ್ತಿದೆ**

ಕೆಪಿಎಸ್‌ಸಿ ನೇಮಕಾತಿ ಹಗರಣದ ಕುರಿತು ಮಾತನಾಡಿದ ಅವರು, ಪ್ರಕರಣದ ತನಿಖೆಯನ್ನು ಸಿಐಡಿ ನಡೆಸುತ್ತಿದೆ. ತಮ್ಮ ಸರ್ಕಾರದ ಅವಧಿಯಲ್ಲಿ ಕೆಪಿಎಸ್‌ಸಿ ಅಧ್ಯಕ್ಷರನ್ನು ನೇಮಕ ಮಾಡಿಲ್ಲ. ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ನೇಮಕಗೊಂಡಿದ್ದ ಅಧ್ಯಕ್ಷರ ಕಾಲದಲ್ಲೇ ಈ ರೀತಿಯ ಅಕ್ರಮಗಳು ನಡೆದಿವೆ. ಈಗಾಗಲೇ ಕೆಲವು ಸಹೋದ್ಯೋಗಿಗಳು ಬಂಧನಕ್ಕೊಳಗಾಗಿದ್ದಾರೆ ಎಂದರು.

ಗ್ರಾಮೀಣಾಭಿವೃದ್ಧಿ ಸಚಿವರಾಗಿದ್ದ ಸಂದರ್ಭದಲ್ಲಿ ಎಇಇಗಳ ನೇಮಕಾತಿಯಲ್ಲಿ ಅಕ್ರಮ ನಡೆದಿದೆ ಎಂಬ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಆರೋಪದ ಬಗ್ಗೆಯೂ ಸಿಐಡಿ ತನಿಖೆಯಲ್ಲಿ ಪರಿಶೀಲನೆ ನಡೆಯಬಹುದು. ತಪ್ಪಿತಸ್ಥರು ಯಾರೇ ಆಗಿದ್ದರೂ ಅವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಹೇಳಿದರು.

### ಬ್ಯಾಡ್ಮಿಂಟನ್: ಮಾನಸಿ ರನ್ನರ್ಸ್ ಅಪ್

**ಜಕಾರ್ತ:** ಭಾರತದ ಉದಯೋನ್ಮುಖ ಆಟಗಾರ್ತಿ ಮಾನಸಿ ಸಿಂಗ್ ಅವರು ಇಂಡೊನೇಷ್ಯಾ ಮಾಸ್ಟರ್ಸ್ ಸೂಪರ್ 100 ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ರನ್ನರ್ಸ್ ಅಪ್‌ನೊಂದಿಗೆ ಅಭಿಯಾನ ಮುಗಿಸಿದರು.

21 ವರ್ಷದ ಮಾನಸಿ ಭಾನುವಾರ ನಡೆದ ಮಹಿಳೆಯರ ಸಿಂಗಲ್ಸ್ ಫೈನಲ್‌ನಲ್ಲಿ 16-21, 8-21ರಿಂದ ಚೀನಾದ ಕ್ಸು ವೆನ್ ಜಿಂಗ್ ವಿರುದ್ಧ ಪರಾಭವಗೊಂಡರು. 19 ವರ್ಷದ ಜಿಂಗ್ ಪ್ರಶಸ್ತಿ ಗೆದ್ದರು.

ವಿಶ್ವದ 76ನೇ ಕ್ರಮಾಂಕದ ಮಾನಸಿ ಸೆಮಿಫೈನಲ್‌ನಲ್ಲಿ ಕೆನಡಾದ ರಾಚೆಲ್ ಚಾನ್ ಅವರನ್ನು ಸೋಲಿಸಿದ್ದರು. ಮತ್ತೊಂದು ಸೆಮಿಫೈನಲ್‌ನಲ್ಲಿ 81ನೇ ರ್‍ಯಾಂಕ್‌ನ ಜಿಂಗ್ ಅವರು ಭಾರತದ ಅನ್ಮೋಲ್ ಖಾರ್ಬ್ ಅವರನ್ನು ಮಣಿಸಿದ್ದರು.

ಮಾನಸಿ ಅವರು ಈ ವರ್ಷದ ಫೆಬ್ರುವರಿಯಲ್ಲಿ ಉಗಾಂಡ ಅಂತರ ರಾಷ್ಟ್ರೀಯ ಚಾಲೆಂಜ್‌ನಲ್ಲೂ ರನ್ನರ್ ಅಪ್ ಆಗಿದ್ದರು.

# ಹಾಕಿ ಗೋಲ್ ಕೀಪರ್ ಮೋಹಿತ್‌ಗೆ ಅಭಿನಂದನೆ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲ್ಲೂಕಿನ ಹೆಮ್ಮೆಯ ಪ್ರತಿಭೆ ಸೀನಿಯರ್ ಹಾಕಿ ವಿಶ್ವಕಪ್ ಪಂದ್ಯದಲ್ಲಿ ಮಿಂಚಿದ ಗೋಲ್ ಕೀಪರ್ ಹೆಚ್.ಎಸ್.ಮೋಹಿತ್ ಅವರಿಗೆ ಶಾಸಕ ಸಿ.ಎನ್.ಬಾಲಕೃಷ್ಣ ಅವರು ಅಭಿನಂದಿಸಿದರು.

ಪಟ್ಟಣದ ಪತ್ರಕರ್ತರ ಭವನದಲ್ಲಿ ಪತ್ರ ಕರ್ತರ ಸಂಘ ಹಾಗೂ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು, ನಮ್ಮ ತಾಲ್ಲೂಕಿನ ಹೆಮ್ಮೆಯ ಪ್ರತಿಭೆ ಮೋಹಿತ್ ಅವರಿಗೆ ತಾಲ್ಲೂಕಿನ ಎಲ್ಲಾ ಕ್ರೀಡಾ ಸಾಧಕರನ್ನು ಒಂದೆಡೆ ಸೇರಿಸಿ ಅದ್ದೂರಿ ಕಾರ್ಯಕ್ರಮ ಹಮ್ಮಿ ಕೊಳ್ಳಲಾಗುತ್ತದೆಂದು ಉತ್ತೇಜನ ನೀಡಿದರು.

ಮುಂದಿನ ದಿನಗಳಲ್ಲಿ ನಮ್ಮ ದೇಶಕ್ಕೆ ಹೆಚ್ಚಿನ ಕೊಡುಗೆ ನೀಡಲಿ. ನಮ್ಮ ಜಿಲ್ಲೆಯ ಕೀರ್ತಿ ಯನ್ನು ಹೆಚ್ಚಿಸಿದವರಲ್ಲಿ ಕ್ರಿಕೆಟ್ ಆಟದಲ್ಲಿ ಜಾವಗಲ್ ಶ್ರೀನಾಥ್ ಹಾಗೂ ಪ್ಯಾರಾ ಒಲಂಪಿಕ್‌ನಲ್ಲಿ ಗಿರೀಶ್ ಅವರು ಸಾಧನೆ ಮಾಡಿ ದ್ದರು. ಅದೇ ರೀತಿ ಯುವ ಪ್ರತಿಭೆ ಮೋಹಿತ್ ಇನ್ನೂ ಹೆಚ್ಚಿನ ಸಾಧನೆ ಮಾಡಲಿ ಎಂದು ಅಭಿನಂದಿಸಿದರು.

ಆರಂಭದಲ್ಲಿ ವಾಲಿಬಾಲ್ ಪಟುವಾಗಿದ್ದ ಅವರು ಹಾಕಿ ಗೋಲ್ ಕೀಪರ್ ಆಗಿ ಆಟವಾಡುತ್ತಿದ್ದಾರೆ. ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಕ್ರೀಡಾ ಕ್ಷೇತ್ರಕ್ಕೆ ಹೆಚ್ಚಿನ ಉತ್ತೇಜನ ನೀಡಿ ವಸತಿ ನಿಲಯಗಳನ್ನ ಉನ್ನತೀಕರಿಸಬೇಕು ಎಂದರು.



**ಮೋಹಿತ್ ಕ್ರೀಡಾ ಸಾಧನೆ**

ನೆದರ್ಲ್ಯಾಂಡ್ ಹಾಗೂ ಬೆಲ್ಜಿಯಂನಲ್ಲಿ ಆಗಸ್ಟ್ 15 ರಿಂದ ಆಗಸ್ಟ್ 30ರ ವರೆಗೆ ನಡೆದ 16 ನೇ ಆವೃತ್ತಿಯ ಎಫ್.ಐ.ಹೆಚ್. (ಫೆಡರೇಷನ್ ಆಫ್ ಇಂಟರ್‌ನ್ಯಾಷನಲ್ ಹಾಕಿ) ವಿಶ್ವಕಪ್‌ನ ಭಾರತೀಯ ಪುರುಷರ ತಂಡದಲ್ಲಿ ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕಿನ ಹಿರೀಸಾವೆ ಹೋಬಳಿ ಹೆಚ್.ಹೊನ್ನೇನಹಳ್ಳಿ ಗ್ರಾಮದ ಹೆಚ್.ಎಸ್. ಮೋಹಿತ್ ಅವರು ಗೋಲ್ ಕೀಪರ್ ಆಗಿ ಉತ್ತಮ ಪ್ರದರ್ಶನ ನೀಡುವ ಮೂಲಕ ವಿಶ್ವದ ಗಮನ ಸೆಳೆದಿದ್ದಾರೆ.

**ಶ್ಲಾಘನೀಯ:** ಜಿಲ್ಲೆಯ ಹಿರೀಸಾವೆ ಹೋಬಳಿ ಹೆಚ್.ಹೊನ್ನೇನಹಳ್ಳಿ ಗ್ರಾಮದ ಹೆಚ್.ವಿ. ಶಶಿಕುಮಾರ್ ಹಾಗೂ ಆಶಾರಾಣಿ ಅವರ ಸುಪುತ್ರನಾಗಿದ್ದು, ಕಿರಿಯ ವಯಸ್ಸಿನಲ್ಲಿಯೇ 12 ವರ್ಷಗಳ ನಂತರ ಕರ್ನಾಟಕ ರಾಜ್ಯದಿಂದ ಭಾರತೀಯ ಸೀನಿಯರ್ ಹಾಕಿ ತಂಡಕ್ಕೆ ಹೆಚ್.ಎಸ್. ಮೋಹಿತ್ ಆಯ್ಕೆಯಾಗಿರುವುದು ಶ್ಲಾಘನೀಯ.

**ತಂದೆಯ ಆಸೆ:** ತಂದೆ ಹೆಚ್.ವಿ.ಶಶಿಕುಮಾರ್ ಅವರಿಗೆ ತನ್ನ ಮಗ ಒಬ್ಬ ದೊಡ್ಡ ಸ್ಪೋರ್ಟ್ಸ್ ಮ್ಯಾನ್ ಆಗಬೇಕೆಂಬ ಆಸೆ ಮೊದಲಿನಿಂದಲೂ ಇದ್ದು, ಅದಕ್ಕೆ ಪೂರಕವಾಗಿ ಮೋಹಿತ್‌ಗೆ ಚಿಕ್ಕ ವಯಸ್ಸಿನಿಂದಲೇ ಅಗತ್ಯ ತರಬೇತಿ ಹಾಗೂ ಸೌಲಭ್ಯಗಳನ್ನು ಕೊಡಿಸುವಲ್ಲಿ ಅವರು ಪಾತ್ರ ವಹಿಸಿರುವುದು ವಿಶೇಷವಾಗಿದೆ.

ಪ್ರಸಕ್ತ 2026ನೇ ಸಾಲಿನಲ್ಲಿ ಸೀನಿಯರ್ ವಿಶ್ವಕಪ್ ಹಾಕಿ ತಂಡಕ್ಕೆ ನೇರ ಆಯ್ಕೆಯಾಗಿ ಉತ್ತಮ ಪ್ರದರ್ಶನ ನೀಡುವ ಮೂಲಕ ಯಶಸ್ಸಿನ ಮೆಟ್ಟಿಲು ಏರಿದ್ದಾರೆಂಬುದು ಪಾಲಕರಿಗೆ ಸಂತಸ ತಂದಿದೆ ಎಂದು ಶಾಸಕರು ಹರ್ಷ ವ್ಯಕ್ತಪಡಿಸಿದರು.

ಮಕ್ಕಳು ಯಾವುದೇ ಕ್ಷೇತ್ರದಲ್ಲಿ ಎತ್ತರಕ್ಕೆ ಬೆಳೆದರೆ ಪಾಲಕರಿಗೆ ಅದಕ್ಕಿಂತ ಸಂತಸದ ವಿಚಾರ ಮತ್ತೊಂದಿಲ್ಲ. ಮಕ್ಕಳಿಗೆ ಆಸ್ತಿ ಸಂಪಾದನೆ ಮಾಡುವ ಬದಲು ಉತ್ತಮ ಸಂಸ್ಕಾರ ಹಾಗೂ ಮೌಲ್ಯಯುತ ಶಿಕ್ಷಣ ಜೊತೆಗೆ ಕ್ರೀಡೆಗೆ ಹೆಚ್ಚು ಆದ್ಯತೆ ನೀಡುವ ಮೂಲಕ ಪ್ರೋತ್ಸಾಹ ಕಲ್ಪಿಸಿ ದರೆ ಮಕ್ಕಳೇ ದೇಶದ ಆಸ್ತಿಯಾಗಲಿದ್ದಾರೆ. ನನ್ನ ಮಗ ದೇಶದ ಪರವಾಗಿ ಆಡುತ್ತಿರುವುದು ಪೂರ್ವಜರ ಪುಣ್ಯವಾಗಿದ್ದು ನನಗೆ ಸಂತಸ ತಂದಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಹಡೇನಹಳ್ಳಿ ಲೋಕೇಶ್, ಟಿಎಪಿಸಿಎಂಎಸ್ ಅಧ್ಯಕ್ಷ ಮೆಡಿಕಲ್ ವೆಂಕಟೇಶ್, ಪುರಸಭಾ ಮಾಜಿ ಅಧ್ಯಕ್ಷ ಮೋಹನ್, ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಗಣೇಶ್, ಮೋಹನ್, ಮೋಹಿತ್ ತಂದೆ ಶಶಿಕುಮಾರ್ ಹಾಗೂ ತಾಯಿ ಆಶಾರಾಣಿ ಇದ್ದರು.

### ಶನಿವಾರ, ಭಾನುವಾರ ಜೂನಿಯರ್ ಕಾಲೇಜು ಮೈದಾನದಲ್ಲಿ ಸೋಮವಾರದ ಸಂತೆ

• ಪ್ರಜೋದಯ ವರದಿ

**ಬೇಲೂರು:** ಸೋಮವಾರ ಗಣಪತಿ ಹಬ್ಬವಿರುವ ಹಿನ್ನಲೆಯಲ್ಲಿ ಪ್ರತಿವಾರ ಸೋಮವಾರ ನಡೆಯುವ ವಾರದ ಸಂತೆಯನ್ನು ಈ ಬಾರಿ ಶನಿವಾರ ಹಾಗೂ ಭಾನುವಾರ ಜೂನಿಯರ್ ಕಾಲೇಜು ಮೈದಾನದಲ್ಲಿ ನಡೆಸಲು ಪುರಸಭೆ ಹಾಗೂ ಪೊಲೀಸ್ ಇಲಾಖೆ ನಿರ್ಧರಿಸಿದೆ ಎಂದು ಪೊಲೀಸ್ ಇನ್ಸ್‌ಪೆಕ್ಟರ್ ರೇವಣ್ಣ ಅವರು ತಿಳಿಸಿದ್ದಾರೆ.

ಪಟ್ಟಣದಲ್ಲಿ ಸಂಚಾರ ದಟ್ಟಣೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಸಂತೆ ವ್ಯಾಪಾರಿಗಳಿಗೆ ಜೂನಿಯರ್ ಕಾಲೇಜು ಮೈದಾನದಲ್ಲಿ ವ್ಯಾಪಾರ ನಡೆಸಲು ಅವಕಾಶ ಕಲ್ಪಿಸಲಾಗಿದೆ. ಸಾರ್ವಜನಿಕರು ಹಾಗೂ ವ್ಯಾಪಾರಿಗಳು ಸಹಕರಿಸುವಂತೆ ಮನವಿ ಮಾಡಿದ್ದಾರೆ.

ಪಟ್ಟಣದ ಬಸ್ ನಿಲ್ದಾಣ, ಬಸವೇಶ್ವರ ವೃತ್ತ, ಅಂಬೇಡ್ಕರ್ ವೃತ್ತ, ಹರ್ಡೇಕರ್ ವೃತ್ತ ಸೇರಿ ಪ್ರಮುಖ



ರಸ್ತೆಗಳ ಬದಿಯಲ್ಲಿ ಹಾಗೂ ಫುಟ್‌ಪಾತ್‌ಗಳಲ್ಲಿ ತರಕಾರಿ, ಹಣ್ಣು ಅಥವಾ ಯಾವುದೇ ರೀತಿಯ ಗಾಡಿಗಳನ್ನು ನಿಲ್ಲಿಸಿ ವ್ಯಾಪಾರ ನಡೆಸುವುದನ್ನು ನಿಷೇಧಿಸಲಾಗಿದೆ. ರಸ್ತೆ ಹಾಗೂ ಫುಟ್‌ಪಾತ್‌ಗಳನ್ನು ವ್ಯಾಪಾರಕ್ಕೆ ಬಳಸುವುದರಿಂದ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗುವುದಲ್ಲದೆ, ಸಾರ್ವಜನಿಕರ ಓಡಾಟಕ್ಕೂ ತೊಂದರೆಯಾಗುತ್ತದೆ. ಆದ್ದರಿಂದ ವ್ಯಾಪಾರಿಗಳು ನಿಗದಿಪಡಿಸಿರುವ ಜೂನಿಯರ್ ಕಾಲೇಜು ಮೈದಾನದಲ್ಲೇ ವ್ಯಾಪಾರ ನಡೆಸಬೇಕೆಂದರು.

### ಮಕ್ಕಳಿಗೆ ಶಿಕ್ಷಣ ಕೊಡಿಸುವುದೇ ಮಹತ್ವದ ಆಸ್ತಿ



• ಪ್ರಜೋದಯ ವರದಿ

**ಮಾಡಾಳು:** ಮಕ್ಕಳಿಗೆ ಆಸ್ತಿ ಮಾಡುವುದಕ್ಕಿಂತ ಉತ್ತಮ ಶಿಕ್ಷಣ ನೀಡಿ ಸಮಾಜದ ಆಸ್ತಿಯನ್ನಾಗಿ ರೂಪಿಸುವುದು ಪೋಷಕರ ಜವಾಬ್ದಾರಿ ಎಂದು ಮಾಡಾಳು ನಿರಂಜನ ಪೀಠ ಸೌಹಾರ್ದ ಸಹಕಾರ ಸಂಘದ ಅಧ್ಯಕ್ಷ ಶ್ರೀ ರುದ್ರಮುನಿ ಸ್ವಾಮೀಜಿ ಹೇಳಿದರು.

ಅರಸೀಕೆರೆ ತಾಲ್ಲೂಕಿನ ಕಣಕಟ್ಟೆ ಹೋಬಳಿ ಮಾಡಾಳು ಗ್ರಾಮದ ನಿರಂಜನ ಪೀಠ ಸೌಹಾರ್ದ ಸಹಕಾರ ಸಂಘದ 2ನೇ ವರ್ಷದ ವಾರ್ಷಿಕ ಮಹಾಸಭೆ ಉದ್ಘಾಟಿಸಿ ಮಾತನಾಡಿದ ಅವರು, ಪ್ರಜ್ಞಾವಂತ ಸಮಾಜ ಕವಲೊಡೆದ ದಾರಿಯಲ್ಲಿ ಸಾಗುತ್ತಿದ್ದು ಯುವಕರು ಆಧುನಿಕ ಜೀವನ ಶೈಲಿಗೆ ಒಳಗಾಗಿ ಸಂಕಷ್ಟ ಎದುರಿಸಿವಂತಾಗಿದೆ. ಪರಿಸರದ ಮೇಲೆ ಮಾನವನ ಅತಿಯಾದ ಹಸ್ತಕ್ಷೇಪದಿಂದ ಪ್ರಕೃತಿ ವಿಕೋಪಗಳು ಸಂಭವಿಸುತ್ತಿದೆ. ಅತಿವೃಷ್ಟಿ ಹಾಗು ಅನಾವೃಷ್ಟಿಯಂತಹ ಪರಿಸ್ಥಿತಿ ಎದುರಾಗಿದೆ. ಜಿಲ್ಲೆಯಲ್ಲಿ ನಿರೀಕ್ಷಿತ ಮಳೆ ಬಾರದೆ ಅನ್ನದಾತರು ಕಂಗಾಲಾಗಿದ್ದಾರೆ. ಚುನಾಯಿತ ಜನ ಪ್ರತಿನಿಧಿಗಳು ಹಾಗು ಸರ್ಕಾರ ತಕ್ಷಣ ರೈತರ ನೆರವಿಗೆ ಧಾವಿಸಬೇಕೆಂದರು.

ಸಹಕಾರ ಸಂಘದ ಉಪಾಧ್ಯಕ್ಷ ನಾಗ ಸಮುದ್ರ ಮರುಳುಸಿದ್ದ ಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಎಸ್.ಸಿ. ಗಂಗಾಧರಪ್ಪ, ನಿರ್ದೇಶಕರಾದ ವಿಜಯ್ ಕುಮಾರ್, ಕಲ್ಲೇಶಪ್ಪ, ಡಿ.ಬಿ.ಕುಮಾರ್, ಸಿ.ಕೆ. ಸುಧಾ, ದ್ರಾಕ್ಷಾಯಿಣಿ, ಎಂ.ಸಿ. ಚಂದ್ರಶೇಖರಪ್ಪ, ಮುಖಂಡ ಕೊಡ್ಲಿ ಬಸವರಾಜ್, ಬ್ಯಾಂಕ್ ಕಾರ್ಯನಿರ್ವಾಹಣಾಧಿಕಾರಿ ಡಿ.ಆರ್.ಸುಷ್ಮಾ ಇದ್ದರು.

# ಅರೇಹಳ್ಳಿಯಲ್ಲಿ ಎಸ್‌ಡಿಪಿಐ ಕಚೇರಿ ಉದ್ಘಾಟನೆ

## ಪಟ್ಟಣದ ಅಭಿವೃದ್ಧಿ, ಸಾಮಾಜಿಕ ನ್ಯಾಯಕ್ಕಾಗಿ ನಿರಂತರ ಹೋರಾಟ ಅಗತ್ಯ : ನಿಂಗರಾಜು

• ಪ್ರಜೋದಯ ವರದಿ

**ಅರೇಹಳ್ಳಿ:** ಪಟ್ಟಣದ ಅಭಿವೃದ್ಧಿ ಹಾಗು ಸಾಮಾಜಿಕ ನ್ಯಾಯಕ್ಕಾಗಿ ಜನಪರ ಸಮಸ್ಯೆಗಳ ಕುರಿತು ಧ್ವನಿ ಎತ್ತುವುದರ ಜೊತೆಗೆ ಸಂಕಷ್ಟದಲ್ಲಿರುವ ಜನರಿಗೆ ನೆರವಾಗುವ ಕಾರ್ಯಗಳನ್ನು ಮುಂದುವರಿಸಬೇಕೆಂದು ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ನಿಂಗರಾಜು ಅವರು ತಿಳಿಸಿದರು.



ಪಟ್ಟಣದ ಮುಖ್ಯ ರಸ್ತೆಯಲ್ಲಿ ಸೋಷಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ (ಎಸ್‌ಡಿಪಿಐ) ಪಕ್ಷದ ನೂತನ ಕಚೇರಿ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜನಪರ ಹೋರಾಟಗಳಲ್ಲಿ ಪಕ್ಷದ ಕಾರ್ಯಕರ್ತರು ತೊಡಗಿಸಿಕೊಂಡಿರುವುದನ್ನು ಶ್ಲಾಘಿಸಿದರು.

ನಾಡಕಚೇರಿಯಲ್ಲಿ ಹಕ್ಕುಪತ್ರ ವಿತರಣೆ ವೇಳೆ ಅಧಿಕಾರಿಗಳು ಭ್ರಷ್ಟಾಚಾರ ನಡೆಸುತ್ತಿದ್ದಾರೆಂಬ ಆರೋಪ ಕೇಳಿಬಂದ ಸಂದರ್ಭದಲ್ಲಿ ಸಂಬಂಧ ಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಪಕ್ಷದ ಕಾರ್ಯಕರ್ತರು ಪ್ರಗತಿಪರ ಸಂಘಟನೆಗಳೊಂದಿಗೆ ಕೈಜೋಡಿಸಿ ಹೋರಾಟ ನಡೆಸಿದ್ದರು. ಕೊರೊನಾ ಸಂಕಷ್ಟದ ಸಂದರ್ಭದಲ್ಲಿ ಜನರಿಗೆ ನೆರವಾಗುವ ವಿವಿಧ ಸಾಮಾಜಿಕ ಸೇವಾ ಕಾರ್ಯಗಳಲ್ಲಿಯೂ ಕಾರ್ಯಕರ್ತರು ತೊಡಗಿಸಿಕೊಂಡಿದ್ದರೆಂದು ತಿಳಿಸಿದರು.

ಪಟ್ಟಣದ ಸಂತೆ ಮೈದಾನದ ಜಾಗ ಗುರುತಿಸುವ ವಿಚಾರ, ಗುಂಡಿಬಿದ್ದ ರಸ್ತೆಗಳ ದುರಸ್ತಿ ಸೇರಿ ಹಲವು ಸಾರ್ವಜನಿಕ ಸಮಸ್ಯೆಗಳ ಕುರಿತು ಪ್ರಗತಿಪರ ಸಂಘಟನೆಗಳೊಂದಿಗೆ ಹೋರಾಟ ನಡೆಸಿರುವುದನ್ನು ಉಲ್ಲೇಖಿಸಿದ ಅವರು, ಬಡವರು ಹಾಗೂ ಅಗತ್ಯವಿರುವ ಕುಟುಂಬಗಳಿಗೆ ಗ್ರಾಮ ಪಂಚಾಯಿತಿ ಮತ್ತು ವಿವಿಧ ಇಲಾಖೆಗಳ ಮೂಲಕ ದೊರೆಯಬೇಕಾದ ಸೌಲಭ್ಯಗಳನ್ನು ಕಲ್ಪಿಸುವಲ್ಲಿಯೂ ಕಾರ್ಯಕರ್ತರು ನೆರವಾಗಿದ್ದಾರೆ. ಜನಪರ ಸಮಸ್ಯೆಗಳ ಪರಿಹಾರಕ್ಕಾಗಿ ಹೋರಾಟ ನಡೆಸುವುದರ ಜೊತೆಗೆ ಸಂಕಷ್ಟದಲ್ಲಿರುವವರಿಗೆ ನೆರವಾಗುವ ಮೂಲಕ ಸಾಮಾಜಿಕ ಜವಾಬ್ದಾರಿ ನಿರ್ವಹಿಸುತ್ತಿರುವುದು ಉತ್ತಮ ಬೆಳವಣಿಗೆ ಎಂದರು.

ಪಟ್ಟಣದ ಅಭಿವೃದ್ಧಿ ಹಾಗೂ ಅಸಹಾಯಕ ಜನರ ಪರವಾಗಿ ಕೆಲಸ ಮಾಡುವ ಯಾವುದೇ ಪಕ್ಷ ಅಥವಾ ಸಂಘಟನೆಗಳ ಜನಪರ ಕಾರ್ಯಗಳಿಗೆ ಸಾರ್ವಜನಿಕರು ಸಹಕಾರ ನೀಡಬೇಕು. ಎಸ್‌ಡಿಪಿಐ ಮುಂದಿನ ದಿನಗಳಲ್ಲಿ ಇನ್ನಷ್ಟು ಜನಪರ ಹಾಗೂ ಸಮಾಜಮುಖಿ ಕಾರ್ಯಗಳನ್ನು ಕೈಗೊಂಡು ಉತ್ತಮವಾಗಿ ಕಾರ್ಯನಿರ್ವಹಿಸಲಿ ಎಂದರು.

ಎಸ್‌ಡಿಪಿಐ ರಾಜ್ಯ ಕಾರ್ಯದರ್ಶಿ ಅಂಗಡಿ ಚಂದ್ರು, ಜಿಲ್ಲಾ ಅಧ್ಯಕ್ಷ ಇಮ್ರಾನ್ ಅರೇಹಳ್ಳಿ, ಅರೇಹಳ್ಳಿ ಘಟಕದ ಅಧ್ಯಕ್ಷ ಅರ್ಶದ್ ಅಹ್ಮದ್, ಉಪಾಧ್ಯಕ್ಷ ಸಂಗಪ್ಪ, ಭೀಮ್ ಆರ್ಮಿ ರಾಜ್ಯ ಉಪಾಧ್ಯಕ್ಷ ಜಯಕುಮಾರ್ ಉಪಸ್ಥಿತರಿದ್ದರು.

### ಯೊಕೊಗಾವಾ ಇಂಡಿಯಾ ಪ್ರತಿನಿಧಿಗಳೊಂದಿಗೆ ಸಂವಾದ

• ಪ್ರಜೋದಯ ವರದಿ

**ಹಾಸನ:** ಯೊಕೊಗಾವಾ ಇಂಡಿಯಾ ಪ್ರೈವೇಟ್ ಲಿಮಿಟೆಡ್‌ನ ಹಿರಿಯ ಪ್ರತಿನಿಧಿಗಳು ನಗರದ ಮಲೆನಾಡು ಇಂಜಿನೀಯರಿಂಗ್ ಕಾಲೇಜಿಗೆ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಯೊಕೊಗಾವಾ ಇಂಡಿಯಾದ ಮಾನವ ಸಂಪನ್ಮೂಲ ವಿಭಾಗದ ಮುಖ್ಯಸ್ಥರಾದ ಸರ್ವೇಶ್ ಸಿಂಗ್ ಭದೌರಿಯಾ ಹಾಗೂ ಪ್ರಾಜೆಕ್ಟ್ ಡೆಲಿವರಿ ವಿಭಾಗದ ಮುಖ್ಯಸ್ಥರಾದ ರವಿಶಂಕರ್ ವಿ. ಅವರು, ಯೊಕೊಗಾವಾ ಸಂಸ್ಥೆಯ ಕಾರ್ಯನಿರ್ವಹಣೆ, ಕೈಗಾರಿಕೆಯ ನಿರೀಕ್ಷೆಗಳು, ಅಗತ್ಯ ತಾಂತ್ರಿಕ ಹಾಗೂ ವೃತ್ತಿಪರ ಕೌಶಲ್ಯಗಳು ಮತ್ತು ನೇಮಕಾತಿ ಪ್ರಕ್ರಿಯೆ ಕುರಿತು ವಿದ್ಯಾರ್ಥಿಗಳಿಗೆ ಮನದಟ್ಟು ಮಾಡಿಕೊಟ್ಟರು. ವಿದ್ಯಾರ್ಥಿಗಳೊಂದಿಗೆ ನೇರ ಸಂವಾದ ನಡೆಸಿ, ವೃತ್ತಿ ಬೆಳವಣಿಗೆ ಹಾಗೂ ಸಂಸ್ಥೆಯಲ್ಲಿನ ವಿವಿಧ ಉದ್ಯೋಗಾವಕಾಶಗಳಿಗೆ ಸಂಬಂಧಿಸಿದ ಪ್ರಶ್ನೆಗಳಿಗೆ ಉತ್ತರಿಸಿದರು.

ಕಾರ್ಯಕ್ರಮದಲ್ಲಿ ಯೊಕೊಗಾವಾದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಎಂಸಿಇ ಹಳೆಯ ವಿದ್ಯಾರ್ಥಿಗಳಾದ ದಯಾನಂದಗೌಡ, ರಾಘವೇಂದ್ರ ಹಾಗೂ ನಾಗೇಂದ್ರ



ಅವರು ಉಪಸ್ಥಿತರಿದ್ದು, ವಿದ್ಯಾರ್ಥಿಗಳೊಂದಿಗೆ ತಮ್ಮ ಅನುಭವಗಳನ್ನು ಹಂಚಿಕೊಂಡರು.

ಪ್ರಾಂಶುಪಾಲ ಡಾ.ಎಸ್.ಪ್ರದೀಪ್ ಅವರೊಂದಿಗೆ ಪ್ರತ್ಯೇಕ ಸಭೆ ನಡೆಸಲಾಯಿತು. ಸಭೆಯಲ್ಲಿ ಎಂಸಿಇ ವಿದ್ಯಾರ್ಥಿಗಳಿಗೆ ಕ್ಯಾಂಪಸ್ ನೇಮಕಾತಿ ಹಾಗೂ ಇಂಟರ್ನ್‌ಶಿಪ್ ಅವಕಾಶಗಳನ್ನು ಕಲ್ಪಿಸುವ ಕುರಿತು ಯೊಕೊಗಾವಾ ಸಂಸ್ಥೆಯ ಪ್ರತಿನಿಧಿಗಳು ಚರ್ಚಿಸಿದರು. ಯೊಕೊಗಾವಾ ಇಂಡಿಯಾ ಮತ್ತು ಎಂಸಿಇ ನಡುವಿನ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವುದು ಹಾಗೂ ನಿರಂತರ ಸಹಯೋಗಕ್ಕೆ ಅವಕಾಶಗಳನ್ನು ಅನ್ವೇಷಿಸುವ ಕುರಿತು ಚರ್ಚಿಸಲಾಯಿತು.

ಎಂಸಿಇಯ ಹಳೆಯ ವಿದ್ಯಾರ್ಥಿಗಳು ಯೊಕೊಗಾವಾ ಸಂಸ್ಥೆಯಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದು, ಅವರ ವೃತ್ತಿಪರ ಸಾಮರ್ಥ್ಯ ಮತ್ತು ಕೊಡುಗೆಯನ್ನು ಯೊಕೊಗಾವಾ ಪ್ರತಿನಿಧಿಗಳು ಶ್ಲಾಘಿಸಿದರು.

ಮಲೆನಾಡು ತಾಂತ್ರಿಕ ಶಿಕ್ಷಣ ಸಮಿತಿ ಕಾರ್ಯದರ್ಶಿ ಜಿ.ಟಿ. ಕುಮಾರ್, ನಿರ್ದೇಶಕ ಎಂ.ಎಸ್. ಸುರೇಶ್, ತರಬೇತಿ ಮತ್ತು ಪ್ಲೇಸ್‌ಮೆಂಟ್ ಅಧಿಕಾರಿ ಡಾ.ಟಿ.ಪಿ. ಜೀವನ್, ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಪ್ರಾಧ್ಯಾಪಕರು ಇತರರು ಉಪಸ್ಥಿತರಿದ್ದರು.

### ರೋಟರಿ ಶಾಲೆಗೆ ಸಮಗ್ರ ಪ್ರಶಸ್ತಿ



• ಪ್ರಜೋದಯ ವರದಿ

**ಅರೇಹಳ್ಳಿ:** ಬೇಲೂರು ತಾಲ್ಲೂಕಿನ ಅರೇಹಳ್ಳಿಯ ಕರ್ನಾಟಕ ಪಬ್ಲಿಕ್ ಶಾಲೆ ಹಾಗೂ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಸಂಯುಕ್ತಾಶ್ರಯದಲ್ಲಿ ಬೇಲೂರು ತಾಲ್ಲೂಕು ಕ್ರೀಡಾಂಗಣದಲ್ಲಿ 2026-27ನೇ ಸಾಲಿನ ಅರೇಹಳ್ಳಿ ಹೋಬಳಿ ಮಟ್ಟದ ಪ್ರೌಢ ಶಾಲೆಗಳ ಕ್ರೀಡಾಕೂಟ ನಡೆಯಿತು.

ಕ್ರೀಡಾಕೂಟದಲ್ಲಿ ಭಾಗವಹಿಸಿದ ರೋಟರಿ ಶಾಲೆಯು ಸಮಗ್ರ ಪ್ರಶಸ್ತಿಗೆ ಭಾಜನವಾಯಿತು. ಜೊತೆಗೆ ಬಾಲಕರ ಚಾಂಪಿಯನ್‌ಶಿಪ್ ಪಟ್ಟ ಅಲಂಕರಿಸಿ ಬಾಲಕರ ವೈಯಕ್ತಿಕ ಚಾಂಪಿಯನ್ ಆಗಿ ಯೋಗಿತ್ ಹೊರ ಹೊಮ್ಮಿದರು. ಕ್ರೀಡಾಕೂಟದಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಶಾಲೆಯ ಆಡಳಿತ ಮಂಡಳಿ ಸದಸ್ಯರು, ಮುಖ್ಯ ಶಿಕ್ಷಕರು, ಸಹ ಶಿಕ್ಷಕರು ಹಾಗೂ ಸಿಬ್ಬಂದಿಗಳು ಅಭಿನಂದಿಸಿದರು.

**ಬಾಲಕರ ವೈಯಕ್ತಿಕ ವಿಭಾಗ:** ಧನುಷ್-1,500 ಮೀ.ಓ (ಪ್ರ), ಸಂಜಯ್-3,000 ಮೀ. ಹಾಗೂ 800.ಮೀ. ಓಟ (ಪ್ರ), ಟ್ರಿಪಲ್ ಜಂಪ್ -(ತೃ), ಯೋಗಿತ್-100 ಮೀ.ಓಟ, 200 ಮೀ.ಓಟ, ಎತ್ತರ ಜಿಗಿತ (ಪ್ರ), ಅರ್ಜುನ್-ಹ್ಯಾಮರ್ ಥ್ರೋ (ಪ್ರ) ಗುಂಡು ಎಸೆತ (ದ್ವಿ), ಭರ್ಜಿ ಎಸೆತ(ದ್ವಿ), ತರುಣ್-ಹ್ಯಾಮರ್ ಥ್ರೋ(ದ್ವಿ), ದೀಕ್ಷಿತ್-400 ಮೀ.ಓಟ (ತೃ).

**ಬಾಲಕರ ಗುಂಪು ವಿಭಾಗ:** ಥ್ರೋ ಬಾಲ್- (ದ್ವಿ), 4★400 ರಿಲೇ (ದ್ವಿ)

**ಬಾಲಕಿಯರ ವೈಯಕ್ತಿಕ ವಿಭಾಗ:** ದೀಕ್ಷಾ-ಹ್ಯಾಮರ್ ಥ್ರೋ (ಪ್ರ), ಎತ್ತರ ಜಿಗಿತ (ತೃ), ಪ್ರತೀಕ್ಷಾ-400 ಮೀ.ಓಟ (ಪ್ರ), 200 ಮೀ.ಓಟ (ದ್ವಿ), ಡಿಂಪಲ್-3,000 ಮೀ.ಓಟ (ದ್ವಿ) 100 ಮೀ.ಓಟ (ತೃ), ವಂಶಿಕಾ-ಹ್ಯಾಮರ್ ಥ್ರೋ (ದ್ವಿ), ನೈಘಾ-ಎತ್ತರ ಜಿಗಿತ (ದ್ವಿ), ಪ್ರಾರ್ಥನ-400ಮೀ.ಓಟ (ತೃ), ಗೌತಮಿ-200ಮೀ.ಓಟ(ತೃ). **ಬಾಲಕಿಯರ ಗುಂಪು ಆಟ:** 4★100 ರಿಲೇ (ಪ್ರ) ಹಾಗೂ 4★400 ರಿಲೇ (ಪ್ರ)

### ಹಿಮ್ಸ್ ಸ್ವಚ್ಛತಾ ಸಿಬ್ಬಂದಿಯಿಂದ ಮೌನ ಪ್ರತಿಭಟನೆ

# ಕೆಆರ್‌ಎಸ್ ಪಕ್ಷದ ಮುಖಂಡರಿಂದ ಕಿರುಕುಳ ಆರೋಪ

• ಪ್ರಜೋದಯ ವರದಿ

**ಹಾಸನ:** ಹಿಮ್ಸ್ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿರುವ ಸ್ವಚ್ಛತಾ ಸಿಬ್ಬಂದಿಗೆ ಕೆಆರ್‌ಎಸ್ ಪಕ್ಷದ ಮುಖಂಡರು ಕಿರುಕುಳ ನೀಡುತ್ತಿದ್ದಾರೆಂದು ಆರೋಪಿಸಿ ಆಸ್ಪತ್ರೆ ಆವರಣದಲ್ಲಿ ಸಿಬ್ಬಂದಿ ಮೌನ ಪ್ರತಿಭಟನೆ ನಡೆಸಿದರು.

ಸ್ವಚ್ಛತಾ ಸಿಬ್ಬಂದಿ ಲಲಿತಾ ಮಾತನಾಡಿ, ಕೆಆರ್‌ಎಸ್ ಪಕ್ಷದ ಮುಖಂಡರು ಪ್ರತಿನಿತ್ಯ ಕೆಲಸ ಮಾಡಲು ಅಡ್ಡಿಪಡಿಸುತ್ತಿದ್ದಾರೆ. ನಾವು ಕೆಲಸ ಮಾಡುವ ಸ್ಥಳಕ್ಕೆ ಏಕಾಏಕಿ ಬಂದು ವಿಡಿಯೋ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡುವ ಮೂಲಕ ನಮಗೆ ಕಿರುಕುಳ ನೀಡುತ್ತಿದ್ದಾರೆ. ನಮ್ಮ ತಪ್ಪಿದ್ದರೆ ಕಾನೂನುಬದ್ಧವಾಗಿ ಹೋರಾಟ ನಡೆಸಲಿ. ಮೇಲಾಧಿಕಾರಿಗಳಿಗೆ ದೂರು ನೀಡಲಿ. ಅದನ್ನು ಬಿಟ್ಟು ಶೌಚಾಲಯ ಸೇರಿ ವಿವಿಧ ಸ್ಥಳಗಳಲ್ಲಿ ಸ್ವಚ್ಛತೆ ಮಾಡುವಾಗ ನಮ್ಮ ಬಟ್ಟೆ ಹಾಗೂ ಕೆಲಸದ ಸ್ಥಿತಿಗತಿ ಗಳನ್ನು ಲೆಕ್ಕಿಸದೆ ವಿಡಿಯೋ ಮಾಡಿ ನಮ್ಮ ಮರ್ಯಾದೆ ಕಳೆಯುವ ಕೆಲಸ ಮಾಡುತ್ತಿದ್ದಾರೆಂದು ದೂರಿದರು.

ಬೆಳಿಗ್ಗೆ ಕೆಲಸಕ್ಕೆ ಬೇಗ ಬರಬೇಕಾದ ಹಿನ್ನಲೆ ಕೆಲವೊಮ್ಮೆ ಉಪಹಾರ ಸೇವಿಸದೆ ಕೆಲಸಕ್ಕೆ ಬಂದಿರುತ್ತೇವೆ. ಅಂತಹ ಸಂದರ್ಭದಲ್ಲಿ ಆಸ್ಪತ್ರೆಯ ಮೇಲಾಧಿಕಾರಿಗಳಿಗೆ ಮನವಿ ಮಾಡಿ ಹೊರಗೆ ಹೋಗಿ ಉಪಹಾರ ಸೇವಿಸಿ ಮರಳುವಾಗಲೂ ಕೆಲವರು ನಮ್ಮನ್ನು ಹಿಂಬಾಲಿಸಿ ವಿಡಿಯೋ ಮಾಡುತ್ತಾರೆ. ಫೋಟೋ ತೆಗೆದು, ನಮಗೆ ಸಂಬಂಧವಿಲ್ಲದ ಪ್ರಶ್ನೆಗಳನ್ನು ಕೇಳುವ ಮೂಲಕ ಮಾನಸಿಕ ಕಿರುಕುಳ ನೀಡುತ್ತಿದ್ದಾರೆಂದು ಆರೋಪಿಸಿದರು.



**ಮರುನೇಮಕಕ್ಕೆ ಮನವಿ**

ಇದೇ ವಿಚಾರಕ್ಕೆ ಸಂಬಂಧಿಸಿದಂತೆ ಮೇಲ್ವಿಚಾರಕ ಮಹೇಶ್ ಅವರನ್ನು ಈಗಾಗಲೇ ಕೆಲಸದಿಂದ ಅಮಾನತುಗೊಳಿಸಲಾಗಿದೆ. ಅವರು ತಮ್ಮ ಕಾರ್ಯದಕ್ಷತೆಯ ಮೂಲಕ ಕೆಲಸಗಾ ರರಿಗೆ ಉತ್ತಮ ಸಹಕಾರ ನೀಡುತ್ತಿದ್ದರು. ಅವರ ವಿರುದ್ಧದ ಕ್ರಮವನ್ನು ಮರುಪರಿಶೀಲಿಸಿ ಅವರನ್ನು ಮತ್ತೆ ಕರ್ತವ್ಯಕ್ಕೆ ನಿಯೋಜಿಸಬೇಕೆಂದು ಸ್ವಚ್ಛತಾ ಸಿಬ್ಬಂದಿ ಮನವಿ ಮಾಡಿದರು.

ಕೆಆರ್‌ಎಸ್ ಪಕ್ಷದವರಿಗೆ ಸ್ವಚ್ಛತಾ ಸಿಬ್ಬಂದಿಯ ಬಗ್ಗೆ ನಿಜವಾಗಿಯೂ ಕಾಳಜಿ ಇದ್ದರೆ, ನಮ್ಮ ಮೇಲೆ ನಡೆಯುತ್ತಿರುವ ಅನ್ಯಾಯದ ವಿರುದ್ಧ ಹೋರಾಟಕ್ಕೆ ಕೈಜೋಡಿಸಲಿ. ಕನಿಷ್ಠ ವೇತನ ಜಾರಿಗಾಗಿ ಈಗಾಗಲೇ ನಡೆಯುತ್ತಿರುವ ಹೋರಾಟಕ್ಕೆ ಬೆಂಬಲ ನೀಡಲಿ. ಅದನ್ನು ಬಿಟ್ಟು ಈ ರೀತಿಯಲ್ಲಿ ಸಿಬ್ಬಂದಿಗೆ ಕಿರುಕುಳ ನೀಡುವುದು ಸರಿಯಲ್ಲ ಎಂದು ಹೇಳಿದರು.

ಖಾಸಗಿ ಆಸ್ಪತ್ರೆಗಳಲ್ಲಿ ಕೆಲಸ ಮಾಡುವ ಕೆಲವರು ತಮ್ಮ ಕೆಲಸದ ಅವಧಿ ಮುಗಿದ ಬಳಿಕ ಅರೆಕಾಲಿಕವಾಗಿ ಬೇರೆಡೆ ಕೆಲಸ ಮಾಡುತ್ತಿದ್ದಾರೆ. ಇಲ್ಲಿ ದೊರೆಯುವ ಸಂಬಳ ಜೀವನ ನಿರ್ವಹಣೆಗೆ ಸಾಕಾಗದ ಕಾರಣ ಹೆಚ್ಚುವರಿ ಸಮಯ ಕೆಲಸ ಮಾಡಬೇಕಾದ ಪರಿಸ್ಥಿತಿ ಇದೆ. ಆದರೆ, ಕೆಆರ್‌ಎಸ್ ಪಕ್ಷದವರು ಸ್ವಚ್ಛತಾ ಸಿಬ್ಬಂದಿಯ ಸಮಸ್ಯೆ ಅರ್ಥಮಾಡಿಕೊಳ್ಳದೆ ನಮ್ಮ ಮೇಲೆ ಒತ್ತಡ ಹೇರುವ ಕೆಲಸ ಮಾಡುತ್ತಿದ್ದಾರೆಂದು ದೂರಿದರು.

### ಸಂಭ್ರಮದ ಸಂಕಷ್ಟಹರ ಚತುರ್ಥಿ

• ಪ್ರಜೋದಯ ವರದಿ



**ಆಲೂರು:** ತಾಲ್ಲೂಕಿನ ಕ ಂ ಚ ವ ್ಮ ನ ಹೊಸಕೋಟೆಯಲ್ಲಿರುವ ಶ್ರೀ ಬಲಮುರಿ ಪ್ರಸನ್ನ ಗಣಪತಿ ದೇವಾಲಯದಲ್ಲಿ ಸಂಕಷ್ಟಹರ ಚತುರ್ಥಿ ಅಂಗವಾಗಿ ಮಹಾಗಣಪತಿ ದೇವರಿಗೆ ವಿಶೇಷ ಪೂಜಾ ಕೈಂಕರ್ಯಗಳು ಭಕ್ತಿ ಭಾವದಿಂದ ನೆರವೇರಿದವು.

ಭಾನುವಾರ ಸಂಜೆ ಗಣಪತಿ ಪೂಜೆ, ಪುಣ್ಯಾಹ ಹಾಗು ಫಲ ಪಂಚಾ ಮೃತ ಅಭಿಷೇಕವನ್ನು ಭಕ್ತರ ಸಮ್ಮುಖ ದಲ್ಲಿ ನೆರವೇರಿಸಲಾಯಿತು. ಬಳಿಕ ದೇವಾಲಯದ ಮೂಲಮೂರ್ತಿಗೆ ನವನೀತ ಅಲಂಕಾರ (ಬೆಣ್ಣೆ ಅಲಂಕಾರ) ಮಾಡಿ ವಿಶೇಷ ಪೂಜಾ ಕೈಂಕರ್ಯ ಜರುಗಿದವು.

ಪ್ರಧಾನ ಅರ್ಚಕ ನರಹರಿ ಭಟ್ ಅವರ ನೇತೃತ್ವದಲ್ಲಿ ಪೂಜಾ ವಿಧಿ ವಿಧಾನಗಳು ನೆರವೇರಿದ ಬಳಿಕ ಮಂಗಳಾರತಿಯೊಂದಿಗೆ ಕಾರ್ಯ ಕ್ರಮವನ್ನು ಸಮಾಪ್ತಿಗೊಳಿಸ ಲಾಯಿತು.

ಸಹಾಯಕ ಅರ್ಚಕ ಅಜಯ್ ಸಿಂಹ, ದೇವರಾಜು, ಭಾಸ್ಕರ್, ವೇಣುಗೋಪಾಲ್, ಅಶೋಕ, ಜಯಣ್ಣ, ಶೇಖರ್, ಕೃಷ್ಣಪ್ಪ, ಸಂಜೀವ, ಮಧು, ಚಿದಂಬರ ರೈ ಇತರರಿದ್ದರು.

## ಟ್ರ್ಯಾಕ್ಟರ್ ಟ್ರ್ಯಾಲಿ ಮೇಲಿಂದ ಬಿದ್ದು ವ್ಯಕ್ತಿ ಸಾವು

• ಪ್ರಜೋದಯ ವರದಿ

**ಅರಕಲಗೂಡು** : ಚಲಿಸುತ್ತಿದ್ದ ಟ್ರ್ಯಾಕ್ಟರ್ ಟ್ರ್ಯಾಲಿಯ ಉಕ್ಕು ತುಂಡರಿಸಿ ಕೆಳಗೆ ಬಿದ್ದ ವ್ಯಕ್ತಿ ಮೃತಪಟ್ಟು, ಮತ್ತೊಬ್ಬರು ಗಂಭೀರವಾಗಿ ಗಾಯಗೊಂಡಿರುವ ಘಟನೆ ತಾಲ್ಲೂಕಿನ ಕಬಳಿಗೆರೆ ಸಮೀಪ ನಡೆದಿದೆ.

ಹಾವೇರಿ ಜಿಲ್ಲೆ ಶಿಗ್ಗಾವಿ ತಾಲ್ಲೂಕು ಶಡಗರವಳ್ಳಿ ಗ್ರಾಮದ ವಾಸಪ್ಪ ಭಜಂತ್ರಿ ಮೃತರು. ಕೂಲಿ ಕೆಲಸ ಅರಸಿ ಅರಕಲಗೂಡಿಗೆ ಬಂದಿದ್ದ ಅವರು ಕಳೆದ ಕೆಲ ವರ್ಷಗಳಿಂದ ನಾಗಾಪುರ ಗ್ರಾಮದ ಗಣೇಶ್ ಎಂಬುವವರ ಬಳಿ ಗಾರೆ ಮತ್ತಿತರ ಕೆಲಸ ಮಾಡಿಕೊಂಡಿದ್ದರು. ಶನಿವಾರ ವಾಸಪ್ಪ ಹಾಗು ರಮೇಶ ಅವರು ಹಳ್ಳಿಮೈಸೂರಿನಲ್ಲಿ ಸಿಮೆಂಟ್ ಲೋಡ್ ಮಾಡಿಕೊಂಡು ಬಿದರೂರು ಗ್ರಾಮಕ್ಕೆ ಹೋಗುತ್ತಿದ್ದರು. ಇಬ್ಬರೂ ಟ್ರ್ಯಾಲಿ ಮೇಲೆ ಕುಳಿತ್ತಿದ್ದರು. ಕಬಳಿಗೆರೆ ಸಮೀಪ ಚಾಲಕ ಟ್ರ್ಯಾಕ್ಟರ್‌ನ್ನು ಜೋರಾಗಿ ಓಡಿಸಿದ್ದರಿಂದ ಉಕ್ಕು ತುಂಡರಿಸಿ ಟ್ರ್ಯಾಕ್ಟರ್‌ನಿಂದ ಟ್ರ್ಯಾಲಿ ಬೇರ್ಪಟ್ಟಿದೆ. ಹೀಗಾಗಿ ಇಬ್ಬರೂ ರಸ್ತೆ ಮೇಲೆ ಬಿದ್ದಿದ್ದಾರೆ. ಚಾಲಕನೇ ತಕ್ಷಣ ಆ್ಯಂಬುಲೆನ್ಸ್ ಮೂಲಕ ಗಾಯಾಳುಗಳನ್ನು ಹಿಮ್ಸ್‌ಗೆ ದಾಖಲಿಸಿದ್ದಾನೆ. ತಲೆಗೆ ಬಲವಾದ ಏಟು ಬಿದ್ದ ಹಿನ್ನಲೆಯಲ್ಲಿ ತೀವ್ರ ರಕ್ತಸ್ರಾವವಾಗಿ ವಾಸಪ್ಪ ಮೃತಪಟ್ಟಿದ್ದಾರೆ. ಕೊಣನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕೆಆರ್‌ಎಸ್ ಪಕ್ಷದ ಮೂವರ ವಿರುದ್ಧ ಎಫ್‌ಐಆರ್

• ಪ್ರಜೋದಯ ವರದಿ

**ಹಾಸನ:** ಕರ್ತವ್ಯಕ್ಕೆ ಅಡ್ಡಿಪಡಿಸಿ ಮಾನಸಿಕ ಕಿರುಕುಳ ನೀಡುತ್ತಿದ್ದಾರೆಂದು ಕೆಆರ್‌ಎಸ್ ಪಕ್ಷದ ಮೂವರ ವಿರುದ್ಧ ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಹೊರಗುತ್ತಿಗೆ ಸಿಬ್ಬಂದಿ ನಗರ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ.

ಕೆಆರ್‌ಎಸ್‌ನ ಮಧು, ರಮೇಶ ಹಾಗು ನಿರಂಜನ ಎಂಬುವವರ ವಿರುದ್ಧ ಹಿಮ್ಸ್ ಭದ್ರತಾ ಸಿಬ್ಬಂದಿ ಜ್ಯೋತಿ ಹಾಗು ತೇಜಾ ಅವರು ದೂರು ನೀಡಿದ್ದಾರೆ. ಆ. 23ರಂದು ಆಸ್ಪತ್ರೆಯ ಹಳೇ ಕಟ್ಟಡದ ಹಾಜರಾತಿ ಕೊಠಡಿಯಲ್ಲಿ ಕೆಲಸ ಮಾಡುತ್ತಿದ್ದಾಗ ಏಕಾಏಕಿ ನುಗ್ಗಿದ ಪಕ್ಷದ ಕಾರ್ಯಕರ್ತರು ಏಜನ್ಸಿಯ ಕ್ಷೇತ್ರ ಅಧಿಕಾರಿ ಮಹೇಶ್ ಅವರನ್ನು ಈ ತಕ್ಷಣ ಕರೆ ಸುವಂತೆ ಒತ್ತಾಯಿಸಿ ಒಳಗಡೆಯಿಂದ ಬಾಗಿಲು ಹಾಕಿ, ಕೆಲಸಕ್ಕೆ ಅಡ್ಡಿಪಡಿಸಿದರು. ವಿನಾ ಕಾರಣ ನಮ್ಮ ಸಿಬ್ಬಂದಿಯ ವಿಡಿಯೋ ಚಿತ್ರೀಕರಣ ಮಾಡಿದ್ದಾರೆ. ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾ ಹಾಜರಾತಿ ಪುಸ್ತಕ ಸೇರಿ ಇತರ ದಾಖಲೆಗಳನ್ನು ನೀಡುವಂತೆ ಒತ್ತಾಯಿಸಿದ್ದಾರೆ. ಅವರ ವರ್ತನೆಯಿಂದ ನಮಗೆ ಮಾನಸಿಕ ಹಿಂಸೆ ಉಂಟಾಗುತ್ತಿದ್ದು, ಕ್ರಮ ಜರುಗಿಸಬೇಕೆಂದು ಆಗ್ರಹಿಸಿದ್ದಾರೆ.

## ಸಚಿವ ಕೆ.ಎಂ.ಶಿವಲಿಂಗೇಗೌಡರಿಗೆ ಶಾಸಕ ಸಿಮೆಂಟ್ ಮಂಜು ಒತ್ತಾಯ

# ಸಕಲೇಶಪುರ-ಆಲೂರು ಬರಪೀಡಿತ ಪಟ್ಟಿಗೆ ಸೇರಿಸಿ

• ಪ್ರಜೋದಯ ವರದಿ



**ಸಕಲೇಶಪುರ:** ಮುಂಗಾರು ಮಳೆ ಕೈಕೊಟ್ಟಿರುವ ಹಿನ್ನಲೆಯಲ್ಲಿ ಆಲೂರು ಮತ್ತು ಸಕಲೇಶಪುರ ತಾಲ್ಲೂಕಿನ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಎರಡೂ ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರಿಸಿ ಪರಿಹಾರ ಕಲ್ಪಿಸಬೇಕೆಂದು ಶಾಸಕ ಸಿಮೆಂಟ್ ಮಂಜು ಅವರು ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಕೆ.ಎಂ.ಶಿವಲಿಂಗೇಗೌಡ ಅವರಿಗೆ ಮನವಿ ಸಲ್ಲಿಸಿದ ಶಾಸಕರು, ಕ್ಷೇತ್ರದಲ್ಲಿನ ರೈತರ ಸಂಕಷ್ಟ ಹಾಗು ಮಳೆ ಕೊರತೆಯಿಂದ ಉಂಟಾಗಿರುವ ಪರಿಸ್ಥಿತಿಯನ್ನು ಸಚಿವರ ಗಮನಕ್ಕೆ ತಂದರು.

ಆಲೂರು ತಾಲ್ಲೂಕನ್ನು ಬರ ಪಟ್ಟಿಯಿಂದ ಕೈಬಿಟ್ಟಿರುವುದು ಸರಿಯಲ್ಲ. ಈಗಾಗಲೇ ಮಳೆ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಮೆಕ್ಕೆಜೋಳ ಶೇ.90ರಷ್ಟು ಬಿಳಿ ಸುಳಿ ರೋಗಕ್ಕೆ ತುತ್ತಾಗಿದೆ. ಬರ ಅಧ್ಯಯನ ತಂಡ ಆಲೂರು ತಾಲ್ಲೂಕಿಗೆ ಭೇಟಿ ನೀಡಿ ವಾಸ್ತವ ಪರಿಸ್ಥಿತಿ ಪರಿಶೀಲಿಸಿದ್ದರೂ ಬರಪೀಡಿತ ಪಟ್ಟಿಯಿಂದ ಕೈಬಿಟ್ಟಿರುವುದು ರೈತರಲ್ಲಿ ಆತಂಕ ಮೂಡಿಸಿದೆ ಎಂದರು.

**ಕೆರೆ-ಕಟ್ಟೆಗಳಿಗೆ ನೀರು ಹರಿಸಲು ಒತ್ತಾಯ**

ಆಲೂರು ತಾಲ್ಲೂಕಿನ ಹಲವು ಕೆರೆ-ಕಟ್ಟೆಗಳು ನೀರಿನ ಕೊರತೆ ಎದುರಿಸುತ್ತಿದ್ದು, ಲಭ್ಯವಿರುವ ಜಲಮೂಲಗಳಿಂದ ಕಾಲುವೆಗಳ ಮೂಲಕ ಕೆರೆಗಳಿಗೆ ನೀರು ಹರಿಸಲು ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕು. ಮುಂದಿನ ಬೇಸಿಗೆಯಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಈಗಿನಿಂದಲೇ ಮುನ್ನೆಚ್ಚರಿಕೆ ವಹಿಸಬೇಕೆಂದು ಸಿಮೆಂಟ್ ಮಂಜು ಆಗ್ರಹಿಸಿದ್ದಾರೆ.

ಸಕಾಲಕ್ಕೆ ಮಳೆಯಾಗದ ಪರಿಣಾಮ ಹಲವು ಕೊಳವೆಬಾವಿಗಳಲ್ಲಿ ನೀರಿನ ಪ್ರಮಾಣ ಕುಸಿಯುತ್ತಿದ್ದು, ಅಂತರ್ಜಲ ಮಟ್ಟವೂ ಇಳಿಕೆಯಾಗುವ ಆತಂಕವಿದೆ. ಪರಿಸ್ಥಿತಿ ಇದೇ ರೀತಿ ಮುಂದುವರಿದರೆ ಬೆಳೆಗಳು ಒಣಗಿ ರೈತರಿಗೆ ಭಾರಿ ನಷ್ಟವಾಗುವುದರ ಜತೆಗೆ ಕುಡಿಯುವ ನೀರು ಹಾಗು ಜಾನುವಾರುಗಳ ಮೇವಿಗೂ ಸಮಸ್ಯೆಯಾಗುವ ಸಾಧ್ಯತೆ ಇದೆ. ಹೀಗಾಗಿ ಸರ್ಕಾರ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಬೇಕೆಂದು ಒತ್ತಾಯಿಸಿದ್ದಾರೆ.

**ಕಾಫಿ, ಮೆಣಸು, ಏಲಕ್ಕಿ, ಅಡಿಕೆಗೂ ಹೊಡೆತ**

ಸಕಲೇಶಪುರ ತಾಲ್ಲೂಕಿನಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದ್ದು, ರೈತರ ಪ್ರಮುಖ ವಾಣಿಜ್ಯ ಬೆಳೆಗಳಾದ ಕಾಫಿ, ಕಾಳುಮೆಣಸು, ಏಲಕ್ಕಿ ಹಾಗು ಅಡಿಕೆ ಬೆಳೆಗಾರರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಹವಾಮಾನ ವೈಪರೀತ್ಯ, ಅತಿವೃಷ್ಟಿ ಹಾಗು ಅನಾವೃಷ್ಟಿಯ ಪರಿಣಾಮ ಬೆಳೆಗಳ ಉತ್ಪಾದನೆ ಮತ್ತು ಗುಣಮಟ್ಟದ ಮೇಲೂ ಪರಿಣಾಮ ಉಂಟಾಗಿದ್ದು, ಬೆಳೆಗಾರರು ಆರ್ಥಿಕ ನಷ್ಟದ ಆತಂಕ ಎದುರಿಸುತ್ತಿದ್ದಾರೆಂದು ಶಾಸಕರು ವಿವರಿಸಿದರು.

ಸರ್ಕಾರ ಕೇವಲ ಅಂಕಿ-ಅಂಶಗಳ ಆಧಾರದಲ್ಲಿ ತೀರ್ಮಾನ ಕೈಗೊಳ್ಳದೆ, ಎರಡನೇ ಹಂತದ ಬರ ಅಧ್ಯಯನ ನಡೆಸಬೇಕು. ಅಧಿಕಾರಿಗಳ ತಂಡವನ್ನು ಗ್ರಾಮಗಳಿಗೆ ಕಳುಹಿಸಿ ಬೆಳೆ ಹಾನಿ, ಮಳೆ ಕೊರತೆ, ಅಂತರ್ಜಲ ಮಟ್ಟ, ಕೆರೆ-ಕಟ್ಟೆಗಳ ಸ್ಥಿತಿ ಹಾಗು ಕುಡಿಯುವ ನೀರಿನ ಪರಿಸ್ಥಿತಿಯನ್ನು ಪರಿಶೀಲಿಸಬೇಕು. ರೈತರೊಂದಿಗೆ ನೇರ ಸಂವಾದ ನಡೆಸಿ ವಾಸ್ತವ ಸ್ಥಿತಿಯನ್ನು ಅರಿತುಕೊಂಡ ಬಳಿಕ ಸಕಲೇಶಪುರ, ಆಲೂರು ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರಿಸಬೇಕೆಂದರು.

ಕ್ಷೇತ್ರದ ರೈತರ ಹಿತದೃಷ್ಟಿಯಿಂದ ಸರ್ಕಾರ ತಕ್ಷಣ ಸ್ಪಂದಿಸಿ ಬರ ಘೋಷಣೆ ಮಾಡುವುದರ ಜೊತೆಗೆ ಬೆಳೆ ಹಾನಿಗೊಳಗಾದ ರೈತರಿಗೆ ನಿಯಮಾನುಸಾರ ಪರಿಹಾರ, ಕುಡಿಯುವ ನೀರು ಹಾಗು ಜಾನುವಾರುಗಳಿಗೆ ಮೇವು ಪೂರೈಕೆಗೆ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕೆಂದರು.

## ಅಹಿಂದಕ್ಕೆ ಶೇ.75 ಮೀಸಲಾತಿ ಸಿಗಬೇಕು

» ಮೊದಲನೇ ಪುಟದಿಂದ

ವೇಶದ ವೇದಿಕೆಯಲ್ಲೇ ಘೋಷಿಸಿದರು. ನಾನು ರಾಜಕಾರಣಕ್ಕೆ ಬಂದು ಕೇವಲ ಮೂರೇ ವರ್ಷ ಆಯ್ತು. ನಮ್ಮ ಸಿದ್ದರಾಮಯ್ಯ ಅವರು ಬಂದು ಬರೋಬ್ಬರಿ 45 ವರ್ಷಗಳಾಗಿವೆ. ನನಗಂತೂ ಕೆಲವೊಮ್ಮೆ ಯಾಕಪ್ಪಾ ರಾಜಕೀಯಕ್ಕೆ ಬಂದೆ ಅನ್ನಿಸಿಬಿಡುತ್ತೆ. ಆದರೆ, ಸಿದ್ದರಾಮಯ್ಯ ಅವರು 45 ವರ್ಷಗಳ ಕಾಲ ನಿರಂತರವಾಗಿ ಹೋರಾಟ ಮಾಡಿದ್ದಾರೆಂದರು. ಪ್ರದೀಪ್ ಈಶ್ವರ್ ಅವರ ಹೇಳಿಕೆ ರಾಜಕೀಯ ವಲಯದಲ್ಲಿ ಭಾರೀ ಚರ್ಚೆಗೆ ಗ್ರಾಸವಾಗಿದೆ.

ನನ್ನ ಎದೆಯಲ್ಲಿ ರಾಮನೂ ಇದ್ದಾನೆ, ಸಿದ್ದರಾಮಯ್ಯನವರೂ ಇದ್ದಾರೆ. ಸಿದ್ದರಾಮಯ್ಯ ಕೇವಲ ಕುರುಬರ ನಾಯಕರಷ್ಟೇ ಅಲ್ಲ, ಅವರು ಇಡೀ ಅಹಿಂದ ನಾಯಕ. ಅಂದು ಅವರನ್ನು ಟಿಕುರಿ ಕಾಯುವವನುಟಿ ಅಂತ ಟೀಕೆ ಮಾಡಿದ್ದರು. ಆದರೆ ಅದೇ ಸಿದ್ದರಾಮಯ್ಯನವರು ಇಂದು ದಾಖಲೆಯ ಬಜೆಟ್ ಮಂಡಿಸಿದ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆಂದರು.

**ಮಧ್ಯಪ್ರದೇಶದಲ್ಲಿ ವಿಷ ಮಿಶ್ರಿತ ಮದ್ಯ ಸೇವಿಸಿ 9 ಮಂದಿ ಸಾವನ್ನಪ್ಪಿ, ಹಲವರು ಅಸ್ವಸ್ಥಗೊಂಡಿದ್ದಾರೆ.**

# ವಿದ್ಯೆ ಕಲಿಸಿದ ಗುರುವಿಗೆ ಗೌರವಿಸುವುದು ಕರ್ತವ್ಯ

• ಪ್ರಜೋದಯ ವರದಿ



**ಬೇಲೂರು:** ಸಮಾಜದಲ್ಲಿ ಮಹತ್ವದ ಸ್ಥಾನ ಹೊಂದಿರುವ ಶಿಕ್ಷಕರನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯವೆಂದು ಶಾಸಕ ಹೆಚ್.ಕೆ. ಸುರೇಶ್ ಅವರು ಹೇಳಿದರು.

ಪಟ್ಟಣದ ಒಕ್ಕಲಿಗರ ಕಲ್ಯಾಣ ಮಂಟಪದ ಸಭಾಂಗಣದಲ್ಲಿ ಶಿಕ್ಷಣ ಇಲಾಖೆ ವತಿಯಿಂದ ಶನಿವಾರ ನಡೆದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನಾಚರಣೆ ಹಾಗು ಶಿಕ್ಷಕರ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

2023ರಲ್ಲಿ ಕ್ಷೇತ್ರದ ಶಾಸಕನಾಗಿ ಆಯ್ಕೆಯಾದ ಬಳಿಕ ಶಿಕ್ಷಕರ ದಿನಾಚರಣೆಗಾಗಿ ಯಾವುದೇ ಕಾರಣಕ್ಕೂ ಚಂದಾ ವಸೂಲಿ ಮಾಡ ಬಾರದೆಂದು ಸೂಚಿಸಿದ್ದೇನೆ. ಎಲ್ಲರೂ ಸೇರಿ ಕಾರ್ಯಕ್ರಮ ಆಯೋಜಿಸಿ ಶಿಕ್ಷಕರನ್ನು ಗೌರವಿಸಬೇಕು. ನಿವೃತ್ತ ಶಿಕ್ಷಕರು ಹಾಗು ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪಡೆದವರನ್ನು ಸನ್ಮಾನಿಸಬೇಕೆಂಬ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಪದಾಧಿಕಾರಿಗಳು ಅದಕ್ಕೆ ಮನಃಪೂರ್ವಕವಾಗಿ ಸಹಕರಿಸಿದ್ದು, ಕಳೆದ ನಾಲ್ಕು ವರ್ಷಗಳಿಂದ ಚಂದಾ ವಸೂಲಿ ಇಲ್ಲದೆ ಶಿಕ್ಷಕರ ದಿನಾಚರಣೆ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಶಿಕ್ಷಣವನ್ನು ಪ್ರಮುಖ ಅಸ್ತ್ರವೆಂದು ಪ್ರತಿಪಾದಿಸಿದ್ದರು. ಪ್ರತಿಯೊಬ್ಬರೂ ವಿದ್ಯಾವಂತರಾಗಬೇಕೆಂಬ ಉದ್ದೇಶದಿಂದ ಸರ್ಕಾರ ಶಿಕ್ಷಣ ಕ್ಷೇತ್ರಕ್ಕೆ ಸಾವಿರಾರು ಕೋ.ರೂ. ಅನುದಾನ ನೀಡುತ್ತಿದೆ. ಶಿಕ್ಷಣ ಸಂಸ್ಥೆಗಳ ಉಳಿವು ಹಾಗು ಅಭಿವೃದ್ಧಿಗೆ ಶ್ರಮಿಸುತ್ತಿರುವ ಶಿಕ್ಷಕರನ್ನು ಗೌರವಿಸುವುದು ನನ್ನ ಸೌಭಾಗ್ಯ ಎಂದರು.

ಬೇಲೂರಿನಲ್ಲಿ ಈ ಹಿಂದೆ ಶಿಕ್ಷಕರ ದಿನಾಚರಣೆಗೆ ಪ್ರಾಥಮಿಕ ಹಾಗು ಪ್ರೌಢಶಾಲಾ ಶಿಕ್ಷಕರು ಮಾತ್ರ ಭಾಗವಹಿಸುತ್ತಿದ್ದರು. ಪದವಿ ಪೂರ್ವ ಹಾಗು ಪ್ರಥಮ ದರ್ಜೆ ಕಾಲೇಜುಗಳ ಶಿಕ್ಷಕರನ್ನೂ ಕಾರ್ಯಕ್ರಮದಲ್ಲಿ ಒಳಗೊಳ್ಳಬೇಕೆಂಬ ಪೂರ್ವಭಾವಿ ಸಭೆಯ ನಿರ್ಧಾರದಂತೆ ಈ ಬಾರಿ ಎಲ್ಲರನ್ನೂ ಸೇರಿಸಲಾಗಿದೆ. ಜಾವಗಲ್ ಹೋಬಳಿಯ ಶಿಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿರುವುದು ಸಂತಸ ತಂದಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಭಾಗ್ಯಮ್ಮ ಅವರು ಮಾತನಾಡಿ, ಕಳೆದ ಬಾರಿಗಿಂತ ಈ ಬಾರಿ ಬೇಲೂರು ತಾಲ್ಲೂಕಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಫಲಿತಾಂಶ ಉತ್ತಮವಾಗಿದೆ. ಅದಕ್ಕೆ ಶಾಸಕರ ಮಾರ್ಗದರ್ಶನ ಹಾಗು ಶಿಕ್ಷಣ ಇಲಾಖೆಯ ಸಹಕಾರವೂ ಕಾರಣವಾಗಿದೆ ಎಂದು ಹೇಳಿದರು.

ಹಾಸನದ ನಿವೃತ್ತ ಶಿಕ್ಷಣಾಧಿಕಾರಿ ಡಾ.ಜೆ.ಬಿ.ತಮ್ಮಣ್ಣಗೌಡ ಅವರು ಮಾತನಾಡಿ, ವೈದ್ಯರು, ಇಂಜಿನೀಯರ್‌ಗಳು, ವಿಜ್ಞಾನಿಗಳು, ನ್ಯಾಯಾಧೀಶರು, ಆಡಳಿತಾಧಿಕಾರಿಗಳು, ಪತ್ರಕರ್ತರು ಹಾಗು ರಾಜಕಾರಣಿಗಳು ಸೇರಿ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುವ ಪ್ರತಿಯೊಬ್ಬರ ಬದುಕಿನ ಯಾವುದೋ ಹಂತದಲ್ಲಿ ಒಬ್ಬ ಶಿಕ್ಷಕರ ಮಾರ್ಗದರ್ಶನ ಇದ್ದೇ ಇರುತ್ತದೆ. ಹೀಗಾಗಿ ಶಿಕ್ಷಕರನ್ನು ರಾಷ್ಟ್ರ ನಿರ್ಮಾಣದ ಶಿಲ್ಪಿಗಳು ಎಂದು ಕರೆಯುವುದು ಸೂಕ್ತ ಎಂದರು.

ಬೇಲೂರು ಪುರಸಭೆ ಅಧ್ಯಕ್ಷ ಅಕ್ರಂ ಶರೀಫ್, ಪ್ರಾಧಿಕಾರದ ಅಧ್ಯಕ್ಷ ಸೈಯದ್ ತೌಫಿಕ್, ವೃತ್ತ ನಿರೀಕ್ಷಕ ರೇವಣ್ಣ, ಪಿಎಸ್‌ಎಸ್ಐ ಪಾಟೀಲ್ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘದ ಅಧ್ಯಕ್ಷ ಉದಯಕುಮಾರ್, ಕ್ಷೇತ್ರ ಸಮನ್ವಯಾಧಿಕಾರಿ ಶಿವಮರಿಯಪ್ಪ, ಅಕ್ಷರ ದಾಸೋಹದ ನಿರ್ದೇಶಕ ಧನಂಜಯ್, ತಾಲ್ಲೂಕು ನೌಕರರ ಸಂಘದ ಅಧ್ಯಕ್ಷ ಮಂಜುನಾಥ್, ತಾಲ್ಲೂಕು ಪ್ರಾಥಮಿಕ ಶಿಕ್ಷಕರ ಸಂಘದ ಅಧ್ಯಕ್ಷ ಗಂಗಾಧರ್, ಪ್ರಕಾಶ್, ನವೀನ್‌ಕುಮಾರ್, ಸಂದೀಪ್, ಲಕ್ಷ್ಮಣ್, ಜಗದೀಶ್, ಹರೀಶ್ ಸೇರಿ ಶಿಕ್ಷಕರು ಹಾಗು ಶಿಕ್ಷಣ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

## ವಿಮಾ ಪರಿಹಾರಕ್ಕೆ 24 ತಾಸು ನಿಯಮ ಕಡ್ಡಾಯ ಸರಿಯಲ್ಲ

• ಪ್ರಜೋದಯ ವರದಿ

**ಬೆಂಗಳೂರು:** ಆಧುನಿಕ ವೈದ್ಯಕೀಯ ತಂತ್ರಜ್ಞಾನ ಸಾಕಷ್ಟು ಬೆಳೆದಿದೆ, ಇಂತಹ ಸಂದರ್ಭದಲ್ಲಿ ರೋಗಿಯು ವಿಮಾ ಪರಿಹಾರಕ್ಕೆ ಆಸ್ಪತ್ರೆಗೆ ದಾಖಲಾಗಿ 24 ತಾಸು ಉಳಿದು ಚಿಕಿತ್ಸೆ ಪಡೆಯಲೇಬೇಕೆಂಬ ನಿಯಮವನ್ನು ಕಡ್ಡಾಯ ಮಾಡುವುದು ಸರಿಯಲ್ಲವೆಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ.

ನಿವೃತ್ತ ಬ್ಯಾಂಕ್ ನೌಕರರೊಬ್ಬರು ವಿಮಾ ಕಂಪನಿಯ ವಿರುದ್ಧ ನ್ಯಾಯಾಂಗ ಹೋರಾಟ ನಡೆಸಿ ತಾವು ಕ್ಯಾನ್ಸರ್ ಚುಚ್ಚು ಮದ್ದಿಗಾಗಿ ಖರ್ಚು ಮಾಡಿದ್ದ ಮೊತ್ತವಲ್ಲದೆ ಹೆಚ್ಚುವರಿಯಾಗಿ 50 ಸಾವಿರ ರೂ. ಪರಿಹಾರ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಅಲ್ಲದೆ, ಆಸ್ಪತ್ರೆಗೆ ದಾಖಲಾಗದೆ ಪಡೆಯುವ ಕ್ಯಾನ್ಸರ್ ಚಿಕಿತ್ಸೆಯ ಇಂಜೆಕ್ಷನ್‌ಗಳ ವೆಚ್ಚವನ್ನೂ ಕೂಡ ವಿಮಾ ಕಂಪನಿ ಭರಿಸಲೇಬೇಕೆಂದು ನ್ಯಾಯಾಲಯ ಆದೇಶ ನೀಡಿದೆ.

ಮಂಗಳೂರಿನ ಕ್ಯಾನ್ಸರ್ ರೋಗಿಯೊಬ್ಬರು ಪಡೆದಿದ್ದ ಇಂಜೆಕ್ಷನ್ ವೆಚ್ಚವನ್ನು ಮರುಪಾವತಿಸಲು ತಾಂತ್ರಿಕ ಕಾರಣ ನೀಡಿ ನಿರಾಕರಿಸಿದ್ದ ನ್ಯಾಷನಲ್ ಇನ್ಶೂರೆನ್ಸ್ ಕಂಪನಿಯ ಕ್ರಮವನ್ನು ನ್ಯಾಯಾಲಯ ಸರಾ ಸಗಟಾಗಿ ತಳ್ಳಿಹಾಕಿದೆ. ವಿಜಯಾ ಬ್ಯಾಂಕ್‌ನ ನಿವೃತ್ತ ಅಧಿಕಾರಿ ಜಿ.ಪದ್ಮನಾಭ ಶೆಟ್ಟಿ ಎಂಬುವವರು ಕ್ಯಾನ್ಸರ್‌ಗೆ ಪಡೆದ ಇಂಜೆಕ್ಷನ್‌ಗಳ ವೆಚ್ಚ ಭರಿಸುವಂತೆ ಲೋಕ ಅದಾಲತ್ ನೀಡಿದ್ದ ಆದೇಶ ರದ್ದು ಕೋರಿ ನ್ಯಾಷನಲ್ ಇನ್ಶೂರೆನ್ಸ್ ಕಂಪನಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯ ಮೂರ್ತಿ ಸೂರಜ್ ಗೋವಿಂದರಾಜ್ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ನೀಡಿದೆ.

ರೋಗಿಯು ತನಗೆ ಇಷ್ಟ ಬಂದಂತೆ ಈ ಇಂಜೆಕ್ಷನ್ ಪಡೆದಿಲ್ಲ. ವೈದ್ಯರ ಕಡ್ಡಾಯ ಲಿಖಿತ ಸಲಹೆ ಮೇರೆಗೆ ಕ್ಯಾನ್ಸರ್ ನಿಯಂತ್ರಣಕ್ಕಾಗಿ ಪಡೆದಿದ್ದಾರೆ. ಕೀಮೊಥೆರಪಿಯ ವೆಚ್ಚ ಭರಿಸಿದ ವಿಮಾ ಕಂಪನಿಯು, ಅದರ ಮುಂದುವರಿದ ಭಾಗವಾದ ಇಂಜೆಕ್ಷನ್ ವೆಚ್ಚ ನಿರಾಕರಿಸಲು ಸಾಧ್ಯವಿಲ್ಲ ಎಂದು ನ್ಯಾಯಪೀಠ ತಿಳಿಸಿದೆ. ಅಲ್ಲದೇ, ಗಂಭೀರ ಕಾಯಿಲೆಯಿಂದ ಬಳಲುತ್ತಿರುವ ವೃದ್ಧರನ್ನು ಇಂತಹ ತಾಂತ್ರಿಕ ಕಾರಣಗಳನ್ನು ನೀಡಿ ನ್ಯಾಯಾಲಯಕ್ಕೆ ಅಲೆಯುವಂತೆ ಮಾಡಿದ ವಿಮಾ ಕಂಪನಿಯ ಕ್ರಮಕ್ಕೆ ಬೇಸರ ವ್ಯಕ್ತಪಡಿಸಿರುವ ಹೈಕೋರ್ಟ್, ಲೋಕ ಅದಾಲತ್ ಆದೇಶಿಸಿದ ಮೊತ್ತ ಮತ್ತು ಬಡ್ಡಿಯನ್ನು 30 ದಿನಗಳೊಳಗೆ ಪಾವತಿಸಬೇಕು ಹಾಗು ಅರ್ಜಿದಾರರಿಗೆ ಕಾನೂನು ಹೋರಾಟಕ್ಕಾಗಿ ವೆಚ್ಚ ಮಾಡಿರುವುದ ರಿಂದ 50 ಸಾವಿರ ರೂ. ಪರಿಹಾರ ನೀಡಬೇಕೆಂದು ನ್ಯಾಯಪೀಠ ಹೇಳಿದೆ.

## ಬರ ಪರಿಹಾರಕ್ಕಾಗಿ ಕೇಂದ್ರದ ವಿರುದ್ಧ ಹೋರಾಟ

• ಪ್ರಜೋದಯ ವರದಿ



**ರಾಯಚೂರು** : ನ್ಯಾಯಾಲಯದ ಮೊರೆ ಹೋಗುವ ಪರಿಸ್ಥಿತಿ ಬರುವ ಮೊದಲೇ ರಾಜ್ಯಕ್ಕೆ ನೀಡಬೇಕಾದ ತೆರಿಗೆ ಪಾಲು ಹಾಗೂ ಬರ ಪರಿಹಾರವನ್ನು ಬಿಡುಗಡೆ ಮಾಡಬೇಕು. ಇಲ್ಲವಾದಲ್ಲಿ ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ ಎಂದು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಅವರು ಹೇಳಿದರು.

ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬರ ಪರಿಹಾರ ನೀಡುವುದು ರಾಜ್ಯ ಸರ್ಕಾರದ ಜವಾಬ್ದಾರಿ ಮಾತ್ರವಲ್ಲ, ಕೇಂದ್ರ ಸರ್ಕಾರದ ಜವಾಬ್ದಾರಿಯೂ ಆಗಿದೆ. ಕಳೆದ ಬಾರಿ ಮನವಿ ಮಾಡಿದರೂ ಪರಿಹಾರ ನೀಡದ ಹಿನ್ನಲೆಯಲ್ಲಿ ನ್ಯಾಯಾಲಯದ ಮೊರೆ ಹೋಗಬೇಕಾಯಿತು. ಇದೇ ಪರಿಸ್ಥಿತಿ ಮುಂದುವರಿದರೆ ಹೋರಾಟದ ಮೂಲಕ ಪರಿಹಾರ ಪಡೆಯಬೇಕಾಗುತ್ತದೆ ಎಂದರು.

ಎನ್‌ಡಿಆರ್‌ಎಫ್ ನಿಯಮಗಳ ಪ್ರಕಾರ ಕೇಂದ್ರ ಸರ್ಕಾರ ರಾಜ್ಯಕ್ಕೆ ನೀಡಬೇಕಾದ ಬರ ಪರಿಹಾರವನ್ನು ಬಿಡುಗಡೆ ಮಾಡಬೇಕು. ಪರಿಹಾರ ನೀಡಲು ವಿಳಂಬ ಮಾಡಿದರೆ ಕೇಂದ್ರದ ವಿರುದ್ಧ ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ. ರಾಜ್ಯವು ಕೇಂದ್ರ ಸರ್ಕಾರಕ್ಕೆ ಹೆಚ್ಚಿನ ಪ್ರಮಾಣದಲ್ಲಿ ತೆರಿಗೆ ಪಾವತಿಸುತ್ತಿದೆ. ಆದರೆ, ರಾಜ್ಯದ ತೆರಿಗೆ ಪಾಲನ್ನು ಕೇಳಿದರೂ ಕೇಂದ್ರ ಸರ್ಕಾರ ಸಮರ್ಪಕವಾಗಿ ನೀಡುತ್ತಿಲ್ಲ. ಈ ಹಿಂದೆ ದೆಹಲಿಯಲ್ಲಿ ಹೋರಾಟ ನಡೆಸಿದರೂ ಕೇಂದ್ರ ಸರ್ಕಾರದ ಪ್ರತಿನಿಧಿಗಳು ರಾಜ್ಯವನ್ನು ಭೇಟಿ ಮಾಡದ ಹಿನ್ನಲೆಯಲ್ಲಿ ಸುಪ್ರೀಂ ಕೋರ್ಟ್ ಮೊರೆ ಹೋಗಿ ತೆರಿಗೆ ಪಾಲನ್ನು ಪಡೆ ಯಬೇಕಾಯಿತು ಎಂದು ಹೇಳಿದರು.

ಬಿಜೆಪಿ ನಡೆಸುತ್ತಿರುವ ಪಾದಯಾತ್ರೆ ವಿಫಲವಾಗಿದೆ. ಇದೀಗ ಕೇವಲ ರಾಜಕೀಯ ಹಾಗೂ ಪ್ರಚಾರದ ಉದ್ದೇಶದಿಂದ ಪಾದಯಾತ್ರೆ ನಡೆಸಲಾಗುತ್ತಿದೆ. ಬಿಜೆಪಿ ಪಾದಯಾತ್ರೆಯ ಪ್ರಮುಖ ಉದ್ದೇಶ ಸಚಿವ ನಾಗೇಂದ್ರ ಅವರು ರಾಜೀನಾಮೆ ನೀಡಬೇಕು ಎಂಬುದಾಗಿತ್ತು. ಆದರೆ, ಪಾದಯಾತ್ರೆ ಆರಂಭಕ್ಕೂ ಮುನ್ನವೇ ನಾಗೇಂದ್ರ ಅವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಿದ್ದಾರೆ. ಹೀಗಾಗಿ ಈಗ ಬಿಜೆಪಿ ನಡೆಸುತ್ತಿರುವ ಪಾದಯಾತ್ರೆ, ರಾಜಕೀಯ ಹಾಗೂ ಪ್ರಚಾರದ ಉದ್ದೇಶದಿಂದ ಕೂಡಿದೆ ಎಂದರು.;

ರಾಜ್ಯ ಸರ್ಕಾರದ ಮತ್ತೊಂದು ವಿಕೆಟ್ ಪತನವಾಗಲಿದೆ ಎಂಬ ಬಿಜೆಪಿ ನಾಯಕರ ಹೇಳಿಕೆಗಳು ಕೇವಲ ಊಹಾಪೋಹ. ರಾಜ್ಯ ಸರ್ಕಾರದಿಂದ ಯಾರೂ ರಾಜೀನಾಮೆ ನೀಡುವುದಿಲ್ಲ. ಯಾವುದೇ ವಿಕೆಟ್ ಕೂಡ ಪತನವಾಗುವುದಿಲ್ಲವೆಂದು ಸ್ಪಷ್ಟಪಡಿಸಿದರು.

## ಇಸ್ರೋ ಖಾಸಗೀಕರಣ: ಸ್ಪಷ್ಟನೆಗೆ ಸಂಘಟನೆಗಳ ಆಗ್ರಹ

• ಪ್ರಜೋದಯ ವರದಿ



**ನವದೆಹಲಿ:** ಸಂಸ್ಥೆಯ ಕೆಲ ಕಾರ್ಯಗಳನ್ನು ಖಾಸಗಿ ಕಂಪನಿಗಳಿಗೆ ವರ್ಗಾಯಿಸುವ ಪ್ರಸ್ತಾವದ ಬಗ್ಗೆ ಅಧಿಕೃತವಾಗಿ ಸ್ಪಷ್ಟೀಕರಣ ನೀಡುವಂತೆ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ (ಇಸ್ರೊ) ನೌಕರರ ಸಂಘಟನೆಗಳು ಒತ್ತಾಯಿಸಿವೆ.

ಈ ಕುರಿತು ಸಂಘಟನೆಗಳು ಇಸ್ರೊ ಮುಖ್ಯಸ್ಥ ವಿ. ನಾರಾಯಣನ್ ಅವರಿಗೆ ಪತ್ರ ಬರೆದಿವೆ. ಇಸ್ರೋದ ಉತ್ಪಾದನೆ ಮತ್ತು ಕಾರ್ಯಾಚರಣೆ ವಿಭಾಗಗಳನ್ನು ಖಾಸಗಿಯವರಿಗೆ ವರ್ಗಾಯಿಸುವ ಉದ್ದೇಶವಿದೆ ಎನ್ನಲಾಗುತ್ತಿದೆ. ಇಂತಹ ಕ್ರಮಗಳಿಂದ ಭವಿಷ್ಯದ ಬಾಹ್ಯಾಕಾಶ ಕಾರ್ಯಕ್ರಮಗಳಿಗೆ ಸಂಬಂಧಿಸಿ ಸಂಸ್ಥೆ ವಹಿಸಲಿರುವ ಪಾತ್ರ ಹಾಲಿ ನೌಕರರ ಮೇಲೆ ಆಗುವ ಪರಿಣಾಮಗಳ ಕುರಿತು ಹಲವು ಪ್ರಶ್ನೆಗಳು ಉದ್ಭವಿಸಿವೆ ಎಂದು ಸಂಘಟನೆಗಳು ಪತ್ರದಲ್ಲಿ ಕಳವಳ ವ್ಯಕ್ತಪಡಿಸಿವೆ. ಇಸ್ರೊ ಕೈಗೊಳ್ಳುವ ವಾಣಿಜ್ಯ ಉದ್ದೇಶದ ನಿರ್ದಿಷ್ಟ ಚಟುವಟಿಕೆಗಳಲ್ಲಿ ಖಾಸಗಿ ಕಂಪನಿಗಳ ಭಾಗವಹಿಸುವಿಕೆಯನ್ನು ಒಪ್ಪಬಹುದು. ಆದರೆ, ವಿವಿಧ ರಾಕೆಟ್, ಗಗನನೌಕೆಗಳ ಉಡ್ಡಯನಕ್ಕೆ ಅಭಿವೃದ್ಧಿಪಡಿಸಿರುವ ಮೂಲ ಸೌಕರ್ಯಗಳನ್ನು ಖಾಸಗಿಯವರಿಗೆ ನೀಡುವುದನ್ನು ಒಪ್ಪಲು ಸಾಧ್ಯ ಇಲ್ಲವೆಂದು ಪತ್ರದಲ್ಲಿ ಹೇಳಲಾಗಿದೆ.

ಇಂತಹ ಮಹತ್ವದ ವಿಚಾರ ಕುರಿತು ಚರ್ಚೆ ನಡೆಸದೇ ತೀರ್ಮಾನ ಕೈಗೊಂಡಲ್ಲಿ ಇಸ್ರೊ ಕಾರ್ಯವು ಕೇವಲ ಸಂಶೋಧನೆ ಮತ್ತು ಅಭಿವೃದ್ಧಿಗೆ (ಆರ್ ಆ್ಯಂಡ್ ಡಿ) ಸೀಮಿತವಾಗಲಿದೆ ಎಂದೂ ಸಂಘಟನೆಗಳು ಕಳವಳ ವ್ಯಕ್ತಪಡಿಸಿವೆ. ಕೆಲ ಕಾರ್ಯಾಚರಣೆಗಳನ್ನು ಖಾಸಗಿಯವರಿಗೆ ವಹಿಸುವ ಪ್ರಸ್ತಾವ ಕುರಿತು ಭಾರತದ ರಾಷ್ಟ್ರೀಯ ಬಾಹ್ಯಾಕಾಶ ಉತ್ತೇಜನ ಮತ್ತು ಅಧಿಕಾರ ಕೇಂದ್ರದ (ಇನ್‌ಸ್ಪೇಸ್) ಅಧ್ಯಕ್ಷ ಪವನ್ ಗೋಯೆಂಕಾ ಅವರು ಆ. 21ರಂದು ನೀಡಿದ್ದ ಹೇಳಿಕೆಗಳನ್ನು ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಬಾಹ್ಯಾಕಾಶ ಕ್ಷೇತ್ರ ದಲ್ಲಿ ಖಾಸಗಿಯವರಿಗೆ ಅವಕಾಶ ಕಲ್ಪಿಸುವ ಉದ್ದೇಶದಿಂದ ಇಸ್ರೋ, ಇನ್‌ಸ್ಪೇಸ್ ಸ್ಥಾಪಿಸಿದೆ. ಕಾರ್ಯಕ್ರಮವೊಂದರಲ್ಲಿ ಗೋಯೆಂಕಾ, ಬರುವ ದಿನಗಳಲ್ಲಿ ಇಸ್ರೊ ಉಪಗ್ರಹ ಉಡ್ಡಯನ ವಾಹನಗಳನ್ನು ತಯಾರಿಸುವುದಿಲ್ಲ. ಖಾಸಗಿ ವಲಯದ ಕಂಪನಿಗಳು ಅಥವಾ ಸಾರ್ವಜನಿಕ ವಲಯದ ಉದ್ದಿಮೆಗಳು (ಪಿಎಸ್‌ಯು) ಈ ಕಾರ್ಯ ಮಾಡಲಿವೆ ಎಂದು ಹೇಳಿದ್ದರು ಎನ್ನಲಾಗಿದೆ.

## ವಿದೇಶದಲ್ಲಿ 3145 ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅವಕಾಶ : ಸಿ.ಎಂ.

» ನಾಲ್ಕನೇ ಪುಟದಲ್ಲಿ

ಕೊಂಡಿದ್ದು, ವಿದೇಶದ ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡಲು 3,145 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದೆ. ಬೆಂಗಳೂರಿನಲ್ಲಿ 1.40 ಕೋಟಿ ಜನಸಂಖ್ಯೆ ಇದೆ. ಭಾರತದಲ್ಲಿ 140 ಅಂತರಾಷ್ಟ್ರೀಯ ಶಾಲೆಗಳಿದ್ದರೆ, ಬೆಂಗಳೂರಿನಲ್ಲಿ 38 ಅಂತರಾಷ್ಟ್ರೀಯ ಶಾಲೆಗಳಿವೆ. ಕರ್ನಾಟಕವು ದೇಶದಲ್ಲಿ ಜ್ಞಾನದ ಕೇಂದ್ರವಾಗಿದೆ. ವಿದ್ಯಾರ್ಥಿಗಳು ನಮ್ಮ ಆಸ್ತಿ. ಅವರ ಚುರುಕುತನವನ್ನು ಇಡೀ ವಿಶ್ವ ಗಮನಿಸುತ್ತಿದೆ ಎಂದರು.

ನಮ್ಮ ಮಕ್ಕಳಿಗೆ ವಿದೇಶದ ವಿಶ್ವವಿದ್ಯಾಲಯಗಳಲ್ಲಿ ಕಲಿಕೆಗೆ ಅವಕಾಶ ಕಲ್ಪಿಸಲಾಗಿದೆ. ಈ ಕಾರ್ಯಕ್ರಮದಲ್ಲಿ 80ಕ್ಕೂ ಹೆಚ್ಚು ವಿಶ್ವವಿದ್ಯಾಲಯಗಳು ಭಾಗವಹಿಸಿದ್ದು, 300ಕ್ಕೂ ಹೆಚ್ಚು ವಿಷಯಗಳಲ್ಲಿ ಅಧ್ಯಯನಕ್ಕೆ ಅವಕಾಶ ಇದೆ. ಸರ್ಕಾರದ ವಿವಿಧ ಇಲಾಖೆಗಳಿಂದ ವಿಶೇಷ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ. ವಿವಿಧ ಬ್ಯಾಂಕ್‌ಗಳು ನೆರವು ನೀಡುತ್ತಿದ್ದು, 2 ಕೋಟಿವರೆಗೂ ಸಾಲ ಸೌಲಭ್ಯ ದೊರೆಯಲಿದೆ ಎಂದರು.

## 2047ರ ವೇಳೆಗೆ ವಿಕಸಿತ ಭಾರತ: ಅಮಿತ್ ಶಾ

• ಪ್ರಜೋದಯ ವರದಿ



**ಪಣಜಿ:** ಮಾದಕ ವಸ್ತು ಮುಕ್ತ ದೇಶದ ಯುವ ಶಕ್ತಿ ಮೂಲಕ 2047ರ ವೇಳೆಗೆ ವಿಕಸಿತ ಭಾರತ ನಿರ್ಮಾಣ ನರೇಂದ್ರ ಮೋದಿ ಅವರ ಗುರಿಯಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಹೇಳಿದ್ದಾರೆ.

ನಕ್ಸಲಿಸಂ ಮತ್ತು ಭಯೋತ್ಪಾದನೆ ನಿಗ್ರಹಿಸಲು ಶ್ರಮಿಸಿದಂತೆ ಅಭಿವೃದ್ಧಿ ಹೊಂದಿದ ದೇಶದ ಕನಸನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ದೇಶವನ್ನು ಮಾದಕ ವಸ್ತುವಿನಿಂದ ಮುಕ್ತಗೊಳಿಸಲು ಮೋದಿ ಸರ್ಕಾರವು ಬದ್ಧವಾಗಿದೆ ಎಂದಿದ್ದಾರೆ. ದೇಶದಲ್ಲಿ ಚಾಚಿಕೊಂಡಿರುವ ಮಾದಕ ವಸ್ತು ಜಾಲವನ್ನು ಸಂಪೂರ್ಣ ತೊಡೆದು ಹಾಕುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು, ರಾಷ್ಟ್ರವ್ಯಾಪಿ ಸಂಘಟಿತ ಕಾರ್ಯತಂತ್ರವನ್ನು ಅಳವಡಿಸಿಕೊಂಡಿದೆ ಎಂದು ತಿಳಿಸಿದ್ದಾರೆ.

ಮಾದಕ ವಸ್ತು ನಿರ್ಮೂಲನೆ ಕುರಿತಂತೆ ಚರ್ಚಿಸಲು ಕರೆದಿದ್ದ ಉನ್ನತ ಮಟ್ಟದ ಸಭೆ ನಂತರ ಶಾ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 2014ಕ್ಕೂ ಮೊದಲು, ಮಾದಕ ವಸ್ತುಗಳ ವಿರುದ್ಧದ ಹೋರಾಟ ದೊಡ್ಡದಾಗಿರಲಿಲ್ಲ. ಸಣ್ಣ ಘಟಕಗಳ ಮೇಲೆ ದಾಳಿ ಮಾಡಿ, ಸ್ಥಳೀಯ ದಂಧೆ ಕೋರರನ್ನು ಬಂಧಿಸುವುದರಲ್ಲೇ ಸಂಸ್ಥೆಗಳು ತೃಪ್ತಿಪಡುತ್ತಿದ್ದವು. ನಮ್ಮ ಸರ್ಕಾರವು ಈ ಹೋರಾಟವನ್ನು ರಾಷ್ಟ್ರೀಯ ಭದ್ರತೆಯ ಆದ್ಯತೆಯನ್ನಾಗಿ ಮಾಡುತ್ತಿದೆ ಎಂದಿದ್ದಾರೆ.

ಮಾದಕ ವಸ್ತುಗಳ ಹಾವಳಿ ವಿರುದ್ಧ ಸಂಘಟಿತ ಹೋರಾಟಕ್ಕಾಗಿ, 2019ರಲ್ಲಿ ರಾಷ್ಟ್ರೀಯ ಸಮನ್ವಯ ಸಮಿತಿ ಎಂಬ ನಾಲ್ಕು ಹಂತದ ವ್ಯವಸ್ಥೆ ರೂಪಿಸಲಾಗಿದೆ. ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಮಾದಕ ವಸ್ತು ತಡೆಗೆ ಮೀಸಲಾದ ಕಾರ್ಯಪಡೆ ರಚಿಸಲಾಗಿದೆ. ರಾಷ್ಟ್ರೀಯ ಕಾರ್ಯತಂತ್ರಕ್ಕಾಗಿ ಸ್ಥಳೀಯ ಪೊಲೀಸರ ಜೊತೆ ಸಮನ್ವಯ ಸಾಧಿಸಲಾಗಿದೆ ಎಂದಿದ್ದಾರೆ.

ಸಭೆಯಲ್ಲಿ ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಅರ್ಜಿ ಆಹ್ವಾನ

• ಪ್ರಜೋದಯ ವರದಿ

**ಹಾಸನ** : ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ(ನಿ) ಹಾಸನ ಜಿಲ್ಲೆ ವತಿಯಿಂದ ಜಿಲ್ಲಾದ್ಯಂತ ವಾಸವಿರುವ ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಜೈನ್, ಬೌದ್ಧ, ಸಿಖ್ಖ್ ಹಾಗೂ ಪಾರ್ಸಿ ಜನಾಂಗದವರಿಗೆ 2026-27ನೇ ಸಾಲಿನಲ್ಲಿ ಅರಿವು (ವಿದ್ಯಾಭ್ಯಾಸ ಸಾಲ) ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಶ್ರಮಶಕ್ತಿ ಯೋಜನೆ, ವೃತ್ತಿ ಪ್ರೋತ್ಸಾಹ ಯೋಜನೆ, ರೇಷ್ಮೆ ನೂಲು ಬಿಚ್ಚಾಣಿಕೆ ಉದ್ಯಮಕ್ಕೆ ಪ್ರೋತ್ಸಾಹ ಯೋಜನೆ, ಗಂಗಾ ಕಲ್ಯಾಣ ಯೋಜನೆ, ನವೋದಯ ಯೋಜನೆ, ಫಾಸ್ಟ್ ಫುಡ್ ಟ್ರಕ್ /ಟ್ರೈಲರ್ ಕಿಚನ್ ಫುಡ್ (ಕಿಯೋಸ್ಕ್)ಯೋಜನೆ, ಅಲ್ಪಸಂಖ್ಯಾತರ ಸಮುದಾಯದ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಸ್ವಯಂ ಉದ್ಯೋಗ ಪ್ರೋತ್ಸಾಹ ಯೋಜನೆ, ಸಿಖ್ಖ್ ಲಿಗಾರ ಸಮುದಾಯದ ಜನರ ಆರ್ಥಿಕ ಸಬಲೀಕರಣಕ್ಕೆ ಪ್ರೋತ್ಸಾಹ ಯೋಜನೆ, ಸಮುದಾಯ ಆಧಾರಿತ ತರಬೇತಿ ಯೋಜನೆ, ವಿದೇಶಿ ವಿದ್ಯಾಭ್ಯಾಸ ಸಾಲ, ವ್ಯಾಪಾರ/ಉದ್ದಿಮೆ ನೇರಸಾಲ ಯೋಜನೆ, ಸಾಂತ್ವನ ಯೋಜನೆಗಳಡಿಯಲ್ಲಿ ನಿಗಮದಿಂದ ಸಾಲ ಹಾಗೂ ಸಹಾಯಧನ ಸೌಲಭ್ಯಗಳನ್ನು ನೀಡಲು ಸೆ.17ರವರೆಗೆ ಆನ್‌ಲೈನ್ Website: kmdconline.karnataka.gov.in ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ ./ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ) ಹಾಸನ ಕಚೇರಿ ಹಾಗೂ ದೂರವಾಣಿ ಸಂಖ್ಯೆ: 08172-246333 ಯನ್ನು ಸಂಪರ್ಕಿಸಬಹುದಾಗಿದೆ.

# ನೇಪಾಳದಲ್ಲಿ ಮತ್ತೆ ಪ್ರವಾಹ ಆತಂಕ ; ಹೈ ಅಲರ್ಟ್

• ಪ್ರಜೋದಯ ವರದಿ



**ಕಠ್ಮಂಡು:** ನೇಪಾಳದಲ್ಲಿ ಮತ್ತೊಂದು ಪ್ರವಾಹದ ಆತಂಕ ಎದುರಾಗಿದ್ದು, ಬುಧಿಗಂಡಕಿ ನದಿ ತೀರದಲ್ಲಿ ಹೈ ಅಲರ್ಟ್ ಘೋಷಣೆ ಮಾಡಲಾಗಿದೆ. ಭಾನುವಾರ ಬೆಳಿಗ್ಗೆ ಸಂಭವಿಸಿದ ಪ್ರವಾಹದ ರಭಸಕ್ಕೆ ನಾಲ್ಕು ಮನೆಗಳು ಹಾಗೂ ತೂಗು ಸೇತುವೆಯೊಂದು ಕೊಚ್ಚಿಹೋಗಿದೆ.

ನೇಪಾಳದ ಪರ್ವತ ಪ್ರದೇಶವಾದ ಗೋರ್ಖಾದಲ್ಲಿ ಪ್ರವಾಹ ಸಂಭವಿಸಿದ ಹಿನ್ನಲೆಯಲ್ಲಿ ಬುಧಿಗಂಡಕಿ ನದಿ ಜಲಾನಯನ ಪ್ರದೇಶದ ಜನರಿಗೆ ಅಧಿಕಾರಿಗಳು ಪ್ರವಾಹದ ಎಚ್ಚರಿಕೆ ನೀಡಿದ್ದಾರೆ. ಗೋರ್ಖಾ ಜಿಲ್ಲೆಯ ಪರ್ವತ ಪ್ರದೇಶದ ಚುಮಾನುಬ್ರಿ ಗ್ರಾಮೀಣ ಪುರಸಭೆಯ 4 ಮತ್ತು 2ನೇ ವಾರ್ಡ್‌ಗಳ ಮೂಲಕ ಹರಿಯುವ ಥೆರಾಂಗ್ ನದಿಯಲ್ಲಿ ಪ್ರವಾಹ ಉಂಟಾದ ಹಿನ್ನೆಲೆಯಲ್ಲಿ ಈ ಎಚ್ಚರಿಕೆ ನೀಡಲಾಗಿದೆ.

ಭಾನುವಾರ ಬೆಳಿಗ್ಗೆ ಸಂಭವಿಸಿದ ಪ್ರವಾಹದ ರಭಸಕ್ಕೆ ನಾಲ್ಕು ಮನೆಗಳು ಹಾಗೂ ತೂಗು ಸೇತುವೆಯೊಂದು ಕೊಚ್ಚಿಹೋಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಜಿಲ್ಲಾ ಪೊಲೀಸ್ ಕಚೇರಿ ನೀಡಿರುವ ಮಾಹಿತಿ ಪ್ರಕಾರ, ಚುಮಾನುಬ್ರಿ ಗ್ರಾಮೀಣ ಪುರಸಭೆಯ 4ನೇ ವಾರ್ಡ್ ನಲ್ಲಿ ವಾಸಿಸುತ್ತಿದ್ದ ನಮ್ರುಂಗ್ಕುರ್ಬು ಓಂಗ್ಯಾಲ್ (ನೂರ್ಬು ತ್ರಿರಿಂಗ್), ಉರ್ಗೆನ್ ಥಾಯೊಡೆನ್, ಲಕ್ಪಾ ಭುತಿ ಹಾಗೂ ದೋರ್ಜೆ ಗ್ಯಾಲ್ಜೆನ್ ಅವರ ಮನೆಗಳು ಪ್ರವಾಹಕ್ಕೆ ಕೊಚ್ಚಿ ಹೋಗಿವೆ.

**ನದಿಯಲ್ಲಿ ನೀರಿನ ಮಟ್ಟ ದಿಢೀರ್ ಏರಿಕೆ**

ಈ ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲವೆಂದು ಜಿಲ್ಲಾ ಪೊಲೀಸ್ ಕಚೇರಿಯ ಮುಖ್ಯಸ್ಥ ಹಾಗೂ ಡೆಪ್ಯುಟಿ ಸೂಪರಿಂಟೆಂಡೆಂಟ್ ಆಫ್ ಪೊಲೀಸ್ ರಾಜ್‌ಕುಮಾರ್ ಶ್ರೇಷ್ಠ ಅವರು ತಿಳಿಸಿದ್ದು, ಪ್ರವಾಹದ ನೀರು ಏರುತ್ತಿರುವುದನ್ನು ಗಮನಿಸಿದ ನಿವಾಸಿಗಳು ತಕ್ಷಣ ಸುರಕ್ಷಿತ ಸ್ಥಳಗಳಿಗೆ ತೆರಳಿದ್ದರು. ಈ ಪ್ರದೇಶದಲ್ಲಿದ್ದ ತೂಗು ಸೇತುವೆಯನ್ನೂ ನದಿ ಕೊಚ್ಚಿಕೊಂಡು ಹೋಗಿದೆ ಎಂದರು.

ಸೇತುವೆ ಕೊಚ್ಚಿಹೋಗಿರುವುದರಿಂದ ಮನಾಸ್ಲು ಪ್ರದೇಶದಲ್ಲಿ ಚಾರಣಕ್ಕೆ ತೆರಳುವ ಪ್ರವಾಸಿಗರಿಗೆ ತೊಂದರೆಯಾಗುವ ಸಾಧ್ಯತೆ ಇದೆ. ಈ ಪ್ರದೇಶದ ಕೆಳಭಾಗದ ಹಸಿರಿನ ಕಣಿವೆಗಳು ಹಾಗೂ ಭತ್ತದ ಗದ್ದೆಗಳಿಂದ ಆರಂಭವಾಗಿ, ಹಿಮದಿಂದ ಆವೃತವಾದ ಪರ್ವತ ದಾರಿಗಳು ಮತ್ತು ಹಿಮಚಿರತೆಗಳಿರುವ ಪ್ರದೇಶಗಳವರೆಗೆ ವ್ಯಾಪಿಸಿರುವ ಮನಾಸ್ಲು ಚಾರಣ ಮಾರ್ಗ ಪ್ರವಾಸಿಗರನ್ನು ಆಕರ್ಷಿಸುತ್ತದೆ.

ಟಿಬೆಟಿಯನ್ ಸಂಸ್ಕೃತಿ ಮತ್ತು ಮಠಗಳಿಂದ ಸಮೃದ್ಧವಾಗಿರುವ ಕಣಿವೆಗಳು, ಹಿಮನದಿಗಳು, ಬೇಸ್ ಕ್ಯಾಂಪ್‌ಗಳು ಹಾಗೂ ಗೊಂಪಾಗಳು ಈ ಪ್ರದೇಶದ ಪ್ರಮುಖ ಆಕರ್ಷಣೆಗಳಾಗಿವೆ. 1990ರ ದಶಕದ ಆರಂಭದವರೆಗೂ ಈ ಚಾರಣ ಪ್ರದೇಶ ವಿದೇಶಿ ಪ್ರವಾಸಿಗರಿಗೆ ಮುಕ್ತವಾಗಿರಲಿಲ್ಲ. ಬಳಿಕ ಕಠಿಣ ಹಾಗೂ ಹೆಚ್ಚು ಅಭಿವೃದ್ಧಿಯಾಗದ ಚಾರಣ ಮಾರ್ಗವನ್ನು ಬಯಸುವ ಪ್ರವಾಸಿಗರಲ್ಲಿ ಇದು ಜನಪ್ರಿಯವಾಯಿತು.

**ಸ್ಥಳೀಯರಲ್ಲಿ ಮತ್ತೆ ಆತಂಕ**

ಚುಮಾನುಬ್ರಿ ಗ್ರಾಮೀಣ ಪುರಸಭೆಯ ಅಧ್ಯಕ್ಷ ನಿಮಾ ಲಾಮಾ, ಈ ಪ್ರದೇಶದಲ್ಲಿ ಪಾದಚಾರಿಗಳ ಸಂಚಾರವನ್ನು ಪುನಃ ಆರಂಭಿಸಲು ಸ್ಥಳೀಯ ಆಡಳಿತ ತಾತ್ಕಾಲಿಕ ಕ್ರಮಗಳನ್ನು ಕೈಗೊಳ್ಳಬಹುದೆಂದು ಹೇಳಿದ್ದಾರೆ.

ಪ್ರವಾಹದ ನೀರು ಕೆಸರು ಮತ್ತು ಅವಶೇಷಗಳನ್ನು ಹೊತ್ತು ತಂದಿದ್ದು, ನದಿಯ ಹೊರಹರಿವಿನ ಮಾರ್ಗವನ್ನು ತಾತ್ಕಾಲಿಕವಾಗಿ ಬಂದ್ ಮಾಡಿದ್ದರಿಂದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಹಾನಿ ಸಂಭವಿಸಿದೆ ಎಂದು ಸಹಾಯಕ ಮುಖ್ಯ ಜಿಲ್ಲಾ ಅಧಿಕಾರಿ ನೇತ್ರ ಪ್ರಸಾದ್ ಶರ್ಮಾ ತಿಳಿಸಿದ್ದಾರೆ.

ಥೆರಾಂಗ್ ನದಿ ಅಂತಿಮವಾಗಿ ಬುಧಿ ಗಂಡಕಿ ನದಿಯನ್ನು ಸೇರುವುದರಿಂದ, ಬುಧಿ ಗಂಡಕಿ ನದಿ ತೀರದಲ್ಲಿ ವಾಸಿಸುವ ಜನರು ಮುನ್ನೆಚ್ಚರಿಕೆ ವಹಿಸುವಂತೆ ಅಧಿಕಾರಿಗಳು ಸೂಚಿಸಿದ್ದಾರೆ.

## ಕ್ಲಸ್ಟರ್ ಕ್ರೀಡಾಕೂಟ: ಮಂಗಳೂರು ಪಬ್ಲಿಕ್ ಶಾಲೆ ಸಾಧನೆ



• ಪ್ರಜೋದಯ ವರದಿ

**ಹಾಸನ:** ನಗರದ ಕಂಚಮಾರನಹಳ್ಳಿಯ ಮಂಗಳೂರು ಪಬ್ಲಿಕ್ ಶಾಲೆಯ ವಿದ್ಯಾರ್ಥಿಗಳು ಕ್ಲಸ್ಟರ್ ಮಟ್ಟದ ಕ್ರೀಡಾಕೂಟದಲ್ಲಿ ಹಲವು ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡು ಶಾಲೆಗೆ ಕೀರ್ತಿ ತಂದಿದ್ದಾರೆ.

ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಕ್ಲಸ್ಟರ್ ಮಟ್ಟದ ಕ್ರೀಡಾಕೂಟದಲ್ಲಿ ಶಾಲೆಯ ವಿದ್ಯಾರ್ಥಿಗಳು ವಿವಿಧ ಕ್ರೀಡಾ ವಿಭಾಗಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದರು. ಬಾಲಕಿಯರ ಖೋ-ಖೋ, ಥ್ರೋಬಾಲ್, ಓಟ ಹಾಗೂ ಗುಂಡು ಎಸೆತ ವಿಭಾಗಗಳಲ್ಲಿ ಮಂಗಳೂರು ಪಬ್ಲಿಕ್ ಶಾಲೆ ಪ್ರಥಮ ಸ್ಥಾನ ಗಳಿಸಿದೆ. ಬಾಲಕರ ಥ್ರೋಬಾಲ್, ಕಬಡ್ಡಿ, ವಾಲಿಬಾಲ್ ಹಾಗು 600 ಮೀಟರ್ ಓಟದಲ್ಲಿಯೂ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

ಅಲ್ಲದೆ ಬಾಲಕರ ರಿಲೇ ಹಾಗು ಬಾಲಕಿಯರ ರಿಲೇ ಸ್ಪರ್ಧೆಗಳಲ್ಲಿ ದ್ವಿತೀಯ ಸ್ಥಾನ, ಬಾಲಕಿಯರ 200 ಮೀಟರ್ ಓಟದಲ್ಲಿ ತೃತೀಯ ಸ್ಥಾನ ಪಡೆದುಕೊಂಡು ಶಾಲೆಯ ಕ್ರೀಡಾ ಸಾಮರ್ಥ್ಯ ಮೆರೆದಿದ್ದಾರೆ.

ವಿವಿಧ ಕ್ರೀಡಾ ವಿಭಾಗಗಳಲ್ಲಿ ವಿದ್ಯಾರ್ಥಿಗಳ ಸತತ ಯಶಸ್ಸು ಶಾಲೆಯ ಶಿಸ್ತುಬದ್ಧ ತರಬೇತಿ ಹಾಗು ಕ್ರೀಡಾ ಚಟುವಟಿಕೆಗಳಿಗೆ ನೀಡುತ್ತಿರುವ ಆದ್ಯತೆಯನ್ನು ಪ್ರತಿಬಿಂಬಿಸಿದೆ. ಕ್ರೀಡಾಕೂಟದಲ್ಲಿ ಭಾಗವಹಿಸಿ ಸಾಧನೆ ಮಾಡಿದ ಎಲ್ಲಾ ವಿದ್ಯಾರ್ಥಿಗಳನ್ನು ಮಂಗಳೂರು ಎಜುಕೇಶನ್ ಅಂಡ್ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಚಂದ್ರರಾಜ್ ಜೈನ್, ಖಜಾಂಚಿ ಸುದೇಶ್, ಶಾಲೆಯ ಪ್ರಾಂಶುಪಾಲೆ ಎನ್.ಜಿ.ಮಮತಾ, ದೈಹಿಕ ಶಿಕ್ಷಣ ಶಿಕ್ಷಕರಾದ ನಿರಂಜನ್ ಹಾಗು ರಕ್ಷಿತ್ ಮತ್ತು ಶಾಲೆಯ ಸಿಬ್ಬಂದಿ ಅಭಿನಂದಿಸಿದ್ದಾರೆ.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019